ಬಳ್ಳಾರಿ । ವಿಜಯನಗರ । ಕೊಪ್ಪಳ । ಬೆಂಗಳೂರು । ದಾವಣಗೆರೆ । ಹುಬ್ಬಳ್ಳಿ-ಧಾರವಾಡ । ಹಾವೇರಿ । ಗದಗ । ಬಾಗಲಕೋಟೆ । ವಿಜಯಪುರ । ಕಲಬುರಗಿ । ತುಮಕೂರು

# ಅನಂತ ಜನಶಕ್ತಿ

ಸಂಪಾದಕ: ಎಸ್.ವೆಂಕಟೇಸುಲು

EDITOR : S VENKATESULU

ANANTHA JANA SAKTHI KANNADA DAILY ಕನ್ನಡ ದಿನಪತ್ರಿಕೆ

ಸಂಪುಟ : 01 ಸಂಚಿಕೆ : 64 ರಿ.ನಂ : ಕೆಎನ್ಎಎನ್ / 26 / ಎ5487 ಬಳ್ಳಾರಿ ಬುಧವಾರ ದಿನಾಂಕ : 16-09-2026 ಪುಟ : 04 ಬೆಲೆ : 2-00

## ಶೇಖ್ ಹಸೀನಾ ಪಕ್ಷದ 7 ನಾಯಕರಿಗೆ ಮರಣದಂಡನೆ ವಿಧಿಸಿದ ಕೋರ್ಟ್



ಢಾಕಾ: ಬಾಂಗ್ಲಾದೇಶದ ಮಾಜಿ ಪ್ರಧಾನಿ ಶೇಖ್ ಹಸೀನಾ ಅವರ ಪಕ್ಷದ 7 ನಾಯಕರಿಗೆ ಕೋರ್ಟ್ ಮರಣದಂಡನೆ ವಿಧಿಸಿದೆ.

2024ರ ದಂಗೆಯನ್ನು ಹತ್ತಿಕ್ಕಲು ಯತ್ನಿಸಿದ ಪ್ರಕರಣದಲ್ಲಿ ಬಾಂಗ್ಲಾದೇಶದ ನ್ಯಾಯಾಲಯ ಮಂಗಳವಾರ ಹಸೀನಾ ಪಕ್ಷದ ಇಬ್ಬರು ಮಾಜಿ ಸಚಿವರು ಸೇರಿದಂತೆ ಏಳು ಹಿರಿಯ ನಾಯಕರಿಗೆ ಮರಣದಂಡನೆ ವಿಧಿಸಿತು. ಬಾಂಗ್ಲಾದಲ್ಲಿ ಧಂಗೆಯಿಂದ ಅಧಿಕಾರ ಕಳೆದುಕೊಂಡ ಶೇಖ್ ಹಸೀನಾ ಅವರ ಅವಾಮಿ ಲೀಗ್ ಪಕ್ಷದ 7 ಸದಸ್ಯರನ್ನು, ಕೊಲೆ ಹಾಗೂ ಹತ್ಯೆಗಳಿಗೆ ಪ್ರಚೋದನೆ ಸೇರಿದಂತೆ ಮಾನವೀಯತೆಯ ವಿರುದ್ಧದ ಅಪರಾಧಗಳಿಗಾಗಿ

2ನೇ ಪುಟಕ್ಕೆ...

## ರೇಣುಕಾಸ್ವಾಮಿ ಕೇಸ್: ಮಾಫಿ ಸಾಕ್ಷಿ ಪ್ರದೋಷ್ ವಿರುದ್ಧ ದೂರು




ಆನೇಕಲ್: ಚಿತ್ರದುರ್ಗದ ರೇಣುಕಾಸ್ವಾಮಿ ಕೇಸ್‌ನಲ್ಲಿ ಮಾಫಿ ಸಾಕ್ಷಿಯಾಗಿ ಪ್ರಕರಣದಿಂದ ಪಾರಾಗಲು ಪ್ರಯತ್ನಿಸುತ್ತಿದ್ದ 14ನೇ ಆರೋಪಿ ಪ್ರದೋಷ್‌ನ ಕಳ್ಳಾಟವೊಂದು ಇದೀಗ ಬಯಲಾಗಿದ್ದು, ಕೇಸ್ ದಾಖಲಾಗಿದೆ. ಪರಪ್ಪನ ಅಗ್ರಹಾರ ಜೈಲಿನಲ್ಲಿರುವ ಆರೋಪಿಗಳಿಗೆ ವಕೀಲರ ಜೊತೆ ಹಾಗೂ ಕುಟುಂಬದವರ ಜೊತೆ ಮಾತನಾಡುವುದಕ್ಕೆ 3 ನಂಬರ್‌ಗಳನ್ನು ಕೊಡಲಾಗುತ್ತದೆ. ವಕೀಲರ ಜೊತೆ ಹಾಗೂ ಕುಟುಂಬದವರ ಜೊತೆ ಮಾತನಾಡಲು ಅವಕಾಶ ಕೊಡುವ ನಂಬರ್ ಅನ್ನು ರಿಜಿಸ್ಟರ್ ಮಾಡಿಸಿಕೊಂಡಿರುತ್ತಾರೆ. ಈ ನಂಬರ್‌ಗಳನ್ನ ನಮೂದು ಮಾಡಿಸಿಕೊಳ್ಳುವ ಜವಾಬ್ದಾರಿಯನ್ನು ಮೌನೇಶ್. ಹೆಚ್.ಕೋರಿ ಎಂಬ ಸಿಬ್ಬಂದಿಗೆ ವಹಿಸಲಾಗಿತ್ತು. ಆರೋಪಿ ಪ್ರದೋಷ್ ಬೇರೆ ಖೈದಿ ಹೆಸರಿನಲ್ಲಿ ನಂಬರ್ ಪಡೆದಿದ್ದ. ಈ ನಂಬರ್ ನೋಂದಾಯಿಸಿಕೊಳ್ಳಲು ಜೈಲು ಸಿಬ್ಬಂದಿ ಮೌನೇಶ್ ಸಹಾಯ ಮಾಡಿದ್ದ. ಅಲ್ಲದೇ ವಕೀಲರ ನಂಬರ್ ಎಂದು ನಮೂದಿಸಿ ಪತ್ನಿಯ ಜೊತೆ ಮಾತನಾಡುತ್ತಿರುವುದು ಇದೀಗ ಬೆಳಕಿಗೆ ಬಂದಿದೆ. ಸದ್ಯ ಈ ಸಂಬಂಧ ಪರಪ್ಪನ ಅಗ್ರಹಾರ ಪೊಲೀಸ್ ಠಾಣೆಯಲ್ಲಿ ಮೌನೇಶ್ ಹಾಗೂ ಪ್ರದೋಷ್ ವಿರುದ್ಧ ದೂರು ದಾಖಲಾಗಿದೆ.

## 15 ದಿನ ಅಷ್ಟೇ ಬಾಕಿ

### ಇ-ಕೆವೈಸಿ ಕೊಡದಿದ್ರೆ ರೇಷನ್ ಕಾರ್ಡ್ ರದ್ದು?



ಬೆಂಗಳೂರು: ರೇಷನ್ ಕಾರ್ಡ್ ಇ ಕೆವೈಸಿ ಮುಕ್ತಾಯಕ್ಕೆ ಕೇವಲ 15 ದಿನ ಅಷ್ಟೇ ಬಾಕಿ ಇದೆ. ಇ-ಕೆವೈಸಿ ಆಗದಿದ್ರೆ ರೇಷನ್ ಕಾರ್ಡ್ ರದ್ದಾಗಲಿದೆ. ಆದರೆ ಇ ಕೆವೈಸಿಗೆ ನೀರಸ ಪ್ರತಿಕ್ರಿಯೆ ವ್ಯಕ್ತವಾಗ್ತಿದೆ. ಇದುವರೆಗೂ ಕೇವಲ 36.44% ಅಷ್ಟೇ ಇ ಕೆವೈಸಿ ಆಗಿದೆ. ಒಂದು ಕಡೆ ಸರ್ವರ್ ಕಾಟ ಮತ್ತೊಂದು ಕಡೆ ಡೆಡ್ ಲೈನ್ ಆತಂಕ ನಡುವೆ ಇದುವರೆಗೂ 36.44% ಅಷ್ಟೇ ಇ ಕೈವೈಸಿ ಆಗಿದೆ.

ಒಟ್ಟು 2.67 ಕೋಟಿ ರೇಷನ್ ಕಾರ್ಡ್‌ಗಳ ಇ-ಕೆವೈಸಿ ಆಗಬೇಕಿದ್ದು, ಇದುವರೆಗೂ 97.54 ಲಕ್ಷ ಅಷ್ಟೇ ಇಕೆವೈಸಿ ಆಗಿದೆ. ಇನ್ನೂ 1.70 ಕೋಟಿ ರೇಷನ್ ಕಾರ್ಡ್‌ಗಳ ಇ ಕೆವೈಸಿ ಆಗಬೇಕಿದೆ. ಒಂದು ವೇಳೆ ಇ ಕೆವೈಸಿ ಮಾಡಿಸದಿದ್ದರೆ ಕಾರ್ಡ್ ರದ್ದಾಗಲಿದೆ. ಸೆಪ್ಟೆಂಬರ್ 30 ಕೊನೆ ದಿನ ಇದ್ದು ಸಮಯ ವಿಸ್ತರಣೆ ಮಾಡುವಂತೆ ಒತ್ತಾಯ ಕೇಳಿ ಬಂದಿದೆ.

ಬೆಂಗಳೂರು ಪೂರ್ವ, ರಾಯಚೂರು, ವಿಜಯಪುರ ಹಾಗೂ ಬೆಳಗಾವಿಯಲ್ಲಿ 50% ಇ ಕೈವೈಸಿ ದಾಟಿದೆ. ಉಡುಪಿ, ಬಳ್ಳಾರಿ, ಬೀದರ್, ಶಿವಮೊಗ್ಗ, ಕೊಪ್ಪಳ ಹಾಗೂ ಚಾಮರಾಜನಗರದಲ್ಲಿ ಶೇಕಾಡ 20 ರಿಂದ 25 ರಷ್ಟು ಇ ಕೈವೈಸಿ ಆಗಿದೆ.

ಪ್ರಿಯ ಓದುಗರೇ ಅನಂತ ಜನಶಕ್ತಿ ದಿನಪತ್ರಿಕೆಗೆ ಜಾಹೀರಾತು ಮತ್ತು ಸುದ್ದಿ ನೀಡಲು ಇಚ್ಛಿಸುವವರು ಸಂಪರ್ಕಿಸಿ

# ಪ್ರಜಾಪ್ರಭುತ್ವದಲ್ಲಿ ಪ್ರಜೆಗಳೇ ಪ್ರಭುಗಳು: ಡಿಕೆಶಿ




ಬೆಂಗಳೂರು : ಪ್ರಜಾಪ್ರಭುತ್ವ ಭಾರತದ ಆತ್ಮ. ಪ್ರಜಾಪ್ರಭುತ್ವದಲ್ಲಿ ಪ್ರಜೆಗಳೇ ಪ್ರಭುಗಳು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದರು.

ವಿಧಾನಸೌಧದ ಬ್ಯಾಕ್ವೆಂಟ್ ಹಾಲ್‌ನಲ್ಲಿಂದು ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನವನ್ನು ಉದ್ಘಾಟಿಸಿ, ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ದೇಶದ ಮಾಜಿ ಉಪಪ್ರಧಾನಿ ಬಾಬು ಜಗಜೀವನರಾಂ ರವರ ಭಾವಚಿತ್ರಗಳಿಗೆ ಪುಷ್ಪನಮನ ಸಲ್ಲಿಸಿ ಮಾತನಾಡಿದ ಅವರು, ಪ್ರಜಾಪ್ರಭುತ್ವ ಇರುವುದು ಬರೀ ಮತ ಹಾಕಲು ಅಲ್ಲ. ಅದೊಂದು ಬದುಕುವ ಹಕ್ಕು. ಪಂಚಾಯ್ತಿಯಿಂದ ಹಿಡಿದು ಸಂಸತ್‌ವರೆಗೂ ಆಯ್ಕೆ ಮಾಡುವ ಹಕ್ಕು ಇರುತ್ತದೆ ಎಂದರು. ನಗರಮಾರ್ಗದರ್ಶಿ ಅನ್ವೇಷಿಸಿ ಸರ್ವರಿಗೂ ಸಮಬಾಳು, ಸಮಪಾಲು ಎಂದು ಹಿರಿಯರು ಮಾರ್ಗದರ್ಶನ ಕೊಟ್ಟಿದ್ದಾರೆ. ಪ್ರಜಾಪ್ರಭುತ್ವ ನಮ್ಮ ಭಾರತದ ಆತ್ಮ ಎಂಬುದನ್ನು ಯಾರೂ ಮರೆಯುವಂತಿಲ್ಲ. ವಿಶ್ವಕ್ಕೆ ಪ್ರಜಾಪ್ರಭುತ್ವ ಬಸವಣ್ಣನವರ ಅನುಭವ ಮಂಟಪದಿಂದ ಹೋಗಿದೆ. ನಾನು ಮುಖ್ಯಮಂತ್ರಿ ಆದ ಮೇಲೆ ಅನುಭವ ಮಂಟಪಕ್ಕೆ ಹೋಗಿದ್ದೆ ಎಂಬುದನ್ನು ನೆನಪಿಸಿಕೊಂಡರು.

ಪ್ರಜೆಗಳೇ ಪ್ರಜಾಪ್ರಭುತ್ವದ ಶಕ್ತಿ. ಮತದಾನ ನಮ್ಮ ಹಕ್ಕು ಎಂದು ಅವರು ತಿಳಿಸಿದರು.

ಜನ ಸರ್ಕಾರಕ್ಕೆ ಹೆದರಿದರೆ ಅದು ಸರ್ವಾಧಿಕಾರ. ಸರ್ಕಾರ ಜನರನ್ನು ಗೌರವಿಸಿದರೆ ಅದು ಪ್ರಜಾಪ್ರಭುತ್ವ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದರು. ಕಾಂಗ್ರೆಸ್ ಪಕ್ಷ ದೇಶಕ್ಕೆ ಪ್ರಜಾಪ್ರಭುತ್ವ, ಸ್ವಾತಂತ್ರ್ಯ ತಂದು ಕೊಟ್ಟ ಪಕ್ಷ. ಕಾಂಗ್ರೆಸ್ ಶಕ್ತಿ ದೇಶದ ಶಕ್ತಿ. ದೇಶಕ್ಕೆ ಸಂವಿಧಾನ, ರಾಷ್ಟ್ರಗೀತೆ, ಪ್ರಜಾಪ್ರಭುತ್ವ, ರಾಷ್ಟ್ರಧ್ವಜ ಕೊಟ್ಟಿದ್ದು ಕಾಂಗ್ರೆಸ್ ಎಂದರು.

ತ್ಯಾಗ ಎನ್ನುವ ಪದ ಎಲ್ಲರಲ್ಲೂ ಇರುವುದಕ್ಕೆ ಸಾಧ್ಯವಿಲ್ಲ. ನೆಹರು ರವರ

2ನೇ ಪುಟಕ್ಕೆ...

## ಸಿದ್ದರಾಮಯ್ಯ ಶಾಶ್ವತ ಮುಖ್ಯಮಂತ್ರಿ ಅಭಿಮಾನಿಗಳಿಂದ ಘೋಷಣೆ



ಮೈಸೂರು: ಮಾಜಿ ಸಿಎಂ ಸಿದ್ದರಾಮಯ್ಯ ಅವರು ನಗರದಲ್ಲಿ ಕಾಂಗ್ರೆಸ್ ಕಚೇರಿ ಕಟ್ಟಡ ಕಾಮಗಾರಿ ಪರಿಶೀಲಿಸಿದರು. ಈ ವೇಳೆ ಅಭಿಮಾನಿಗಳು ಸಿದ್ದರಾಮಯ್ಯ ಶಾಶ್ವತ ಮುಖ್ಯಮಂತ್ರಿ ಎಂದು ಘೋಷಣೆ ಕೂಗಿದ್ದಾರೆ.

ಮೈಸೂರು ಕಾಂಗ್ರೆಸ್ ಮಾಜಿ ಜಿಲ್ಲಾಧ್ಯಕ್ಷ ಬಿ.ಜೆ ವಿಜಯಕುಮಾರ್ ಅವರು ಘೋಷಣೆ ಕೂಗಿದ್ದಾರೆ. ಸನ್ಮಾನ ಮಾಡುವ ವೇಳೆ ಶಾಶ್ವತ ಮುಖ್ಯಮಂತ್ರಿ ಸಿದ್ದರಾಮಯ್ಯ ಎಂದು ಅವರು ಘೋಷಣೆ ಕೂಗಿದರು. ಈ ವೇಳೆ 2028 ಕ್ಕೂ ಸಿದ್ದರಾಮಯ್ಯ ಮುಖ್ಯಮಂತ್ರಿ ಎಂದು ಕೈ ಕಾರ್ಯಕರ್ತರು ಘೋಷಣೆ ಕೂಗಿದ್ದಾರೆ. ಮೈಸೂರಿನ ರೈಲ್ವೆ ನಿಲ್ದಾಣದ ಬಳಿ ಕಾಂಗ್ರೆಸ್ ಕಚೇರಿ ನಿರ್ಮಾಣ ಕಾಮಗಾರಿ ನಡೆಯುತ್ತಿದೆ. ಕಾಮಗಾರಿ ಪರಿಶೀಲನೆ ಮಾಡಿ ಸಿದ್ದರಾಮಯ್ಯ ಅವರು ಅಲ್ಲಿಂದ ತೆರಳಿದ್ದಾರೆ.

## ಬೆಂಗಳೂರಿನಲ್ಲಿ ವರುಣಾರ್ಭಟ: 1 ಗಂಟೆಗೂ ಹೆಚ್ಚು ಕಾಲ ಸುರಿದ ಮಳೆ



ಬೆಂಗಳೂರು: ಕಳೆದ ಎರಡ್ಮೂರು ದಿನಗಳಿಂದ ಬಿಸಿಲಿನ ಧಗೆಯಿಂದ ಕಂಗೆಟ್ಟಿದ್ದ ರಾಜಧಾನಿ ಬೆಂಗಳೂರಿನ ಜನತೆಗೆ ಮಳೆರಾಯ ತಂಪೆರೆದಿದ್ದು, ಹಲವು ಕಡೆ ಮಂಗಳವಾರ ಬಿರುಗಾಳಿ ಸಹಿತ ಧಾರಾಕಾರ ಮಳೆಯಾಗಿದೆ. ಇಂದು ಸಂಜೆ 6 ಗಂಟೆಯ ಸುಮಾರಿಗೆ ಆರಂಭವಾದ ಮಳೆ 7 ಗಂಟೆಯವರೆಗೂ ಸುರಿದಿದ್ದು, ಕಚೇರಿಯಿಂದ ಮನೆಗೆ ತೆರಳುತ್ತಿದ್ದ ವಾಹನ ಸವಾರರು ಪರದಾಡುವ ಸ್ಥಿತಿ ನಿರ್ಮಾಣವಾಗಿದೆ.

# ‘ಯಾರನ್ನೂ ಸ್ಟಾಪ್ ಮಾಡೋಕೆ ಆಗಲ್ಲ’

## ಯಾವ ದಾಖಲೆ ಬೇಕಾದ್ರೂ ಬಿಡುಗಡೆ ಮಾಡಿಕೊಳ್ಳಲಿ: ಡಿಕೆಶಿ





ಬೆಂಗಳೂರು: ಕೇಂದ್ರ ಸಚಿವ ಹೆಚ್ ಡಿ ಕುಮಾರಸ್ವಾಮಿ ಇಂದು ಹಾಸನದಲ್ಲಿ ಆಡಿರುವ ಮಾತಿಗೆ ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ತಿರುಗೇಟು ನೀಡಿದ್ದಾರೆ. ಯಾರು ಏನು ಬೇಕಾದರೂ ಮಾತನಾಡಲಿ, ಏನಾದರೂ ಚರ್ಚೆ ಮಾಡಲಿ, ಯಾರು ಯಾರನ್ನು ಬೇಕಾದರೂ ಸ್ಟಾಪ್ ಮಾಡಲು ಆಗುತ್ತಾ ಎಂದು ಹೇಳಿದ್ದಾರೆ.

ಯಾರು ಯಾವ ವಿಚಾರ ಬೇಕಾದರೂ ಚರ್ಚಿಸಲಿ, ಏನು ಬೇಕಾದರೂ ಬಿಡುಗ- ಡೆ ಮಾಡಿಕೊಳ್ಳಲಿ ಎಂದು ಡಿ ಕೆ ಶಿವಕುಮಾರ್ ಸವಾಲು ಹಾಕಿದ್ದಾರೆ. ನಾನು ಯಾವುದೇ ದಾಖಲೆ ಇಲ್ಲದೇ ಯಾರ ಬಗ್ಗೆಯೂ ಮಾತನಾಡಲು ಹೋಗುವುದಿಲ್ಲ, ಅಮೆರಿಕಗೆ ಹೋಗುವ ಮುನ್ನ ಏನು ಹೇಳಿಕೆ ನೀಡಿದ್ದೆ, ಅದ- ಕ್ಕೆ ಬದ್ಧನಾಗಿದ್ದೇನೆ. ನಾನು ಅಮೆರಿಕಗೆ ಹೋಗಿದ್ದಂತಹ ಸಂದರ್ಭದಲ್ಲಿ ನೈಸ್ ಸಂಸ್ಥೆಯ ಗುತ್ತಿಗೆದಾರರೊಬ್ಬರು ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರನ್ನು ಭೇಟಿಯಾದ ಫೋಟೋಗಳನ್ನು ನಾನು ಗಮನಿಸಿದ್ದೇನೆ, ಸೂಕ್ತ ದಾಖಲೆಯೊಂದಿಗೆ ಬಿಡುಗಡೆ ಮಾಡುತ್ತೇನೆ ಎಂದು ಹೆಚ್ ಡಿ ಕುಮಾರಸ್ವಾಮಿ ಹೇಳಿದ್ದರು.

## ‘ವಂದೇ ಮಾತರಂ’ ಮೊದಲ ಎರಡು ಚರಣಗಳಿಗೆ ಸೀಮಿತ




ನವದೆಹಲಿ : ಸರ್ಕಾರದ ಕಾರ್ಯಕ್ರಮಗಳಲ್ಲಿ ರಾಷ್ಟ್ರಗೀತೆ ‘ವಂದೇ ಮಾತರಂ’ನ ಮೊದಲ ಎರಡು ಚರಣಗಳನ್ನು ಮಾತ್ರ ಹಾಡಬೇಕು ಎಂದು ಇತ್ತೀಚೆಗೆ ಹೊರಡಿಸಿರುವ ಆದೇಶವನ್ನು ಪ್ರಶ್ನಿಸಿ ಹೈಕೋರ್ಟ್‌ನಲ್ಲಿ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಸಲಾಗಿದೆ. ರಾಷ್ಟ್ರಪತಿ, ಉಪ ರಾಷ್ಟ್ರಪತಿ, ಪ್ರಧಾನಮಂತ್ರಿ ಅಥವಾ ರಾಜ್ಯಪಾಲರು ಭಾಗವಹಿಸುವ ಕಾರ್ಯಕ್ರಮಗಳನ್ನು ಇದರಿಂದ ಹೊರಗಿಡಲಾಗಿದೆ. ವಕೀಲ

2ನೇ ಪುಟಕ್ಕೆ...

## ಉಮರ್ ಖಾಲಿದ್ ರಾಷ್ಟ್ರೀಯವಾದಿ: ಕೆಪಿಸಿಸಿ ಅಧ್ಯಕ್ಷ ಹರಿಪ್ರಸಾದ್ ವಿವಾದ



ಬೆಂಗಳೂರು: ಉಮರ್ ಖಾಲಿದ್ ರಾಷ್ಟ್ರೀಯವಾದಿ ಅವರ ಬಗ್ಗೆ ಮಾತನಾಡುವ ನೈತಿಕತೆ ಅಖಿಲ ಭಾರತ ವಿದ್ಯಾರ್ಥಿ ಪರಿಷತ್‌ಗೆ ಇಲ್ಲ ಎಂದು ಕೆಪಿಸಿಸಿ ಅಧ್ಯಕ್ಷ ಬಿಕೆ ಹರಿಪ್ರಸಾದ್ ಕಿಡಿಕಾರಿದ್ದಾರೆ. ಬೆಂಗಳೂರಿನ ನ್ಯಾಷನಲ್ ಲಾ ಸ್ಕೂಲ್

2ನೇ ಪುಟಕ್ಕೆ...

## ಪ್ರಜಾಪ್ರಭುತ್ವವಿರುವ ದೇಶಗಳಲ್ಲಿ ಶಾಂತಿಯುತ ವಾತಾವರಣವಿದೆ: ಪರಂ



ಬೆಂಗಳೂರು: ಯಾವ ದೇಶದಲ್ಲಿ ಮುಕ್ತ ಮತ್ತು ನ್ಯಾಯಸಮ್ಮತ ಚುನಾವಣೆ ವ್ಯವಸ್ಥೆ ಇದೆ. ಯಾವ ದೇಶದಲ್ಲಿ ಮಾನವತ್ವದ ಹಕ್ಕುಗಳಿಗೆ ಬೆಲೆ ಇದೆ. ಯಾವ ದೇಶದಲ್ಲಿ ಪತ್ರಿಕಾ ಸ್ವಾತಂತ್ರ್ಯವಿದೆ. ಯಾವ ದೇಶದ ಆಡಳಿತದಲ್ಲಿ ಜನಸಮುದಾಯದ ಭಾಗವಹಿಸುವಿಕೆ ಇದೆ ಮತ್ತು ಯಾವ ದೇಶದಲ್ಲಿ ಹೊಣೆಗಾರಿಕೆ ಮತ್ತು ಪಾರದರ್ಶಕತೆ ಇದೆಯೋ, ಆ ದೇಶಗಳಲ್ಲಿ ಮಾತ್ರ ಇಂದು ಶಾಂತಿಯುತ ವಾತಾವರಣವಿದೆ. ಅದನ್ನೇ ನಾವು ಪ್ರಜಾಪ್ರಭುತ್ವ ಎಂದು ಕರೆಯುತ್ತೇವೆ ಎಂದು ಡಿಸಿಎಂ ಡಾ. ಜಿ.ಪರಮೇಶ್ವರ್ ಹೇಳಿದರು.

ಸಮಾಜ ಕಲ್ಯಾಣ ಇಲಾಖೆಯ ಆಶ್ರಯದಲ್ಲಿ ಇಂದು ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ನಡೆದ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯಲ್ಲಿ ಭಾಗವಹಿಸಿ ಮಾತನಾಡಿದ ಡಾ. ಜಿ.ಪರಮೇಶ್ವರ ಅವರು, ಪ್ರಪಂಚದಲ್ಲಿ 90 ಪ್ರಜಾಪ್ರಭುತ್ವದ ದೇಶಗಳಿವೆ. ಇನ್ನುಳಿದ ದೇಶಗಳಲ್ಲಿ ನಡೆಯುವಂತಹ ವಿದ್ಯಮಾನಗಳೇ ಬೇರೆ, ಆಡಳಿತವೇ ಬೇರೆ. ನಮ್ಮ ನೆರೆಯ ದೇಶಗಳಾದ ಶ್ರೀಲಂಕಾ, ಬಾಂಗ್ಲಾದೇಶ, ಪಾಕಿಸ್ತಾನ, ನೇಪಾಳಗಳಲ್ಲಿ ಏನೇನು ನಡೆಯಿತು ಎಂಬುದನ್ನು ಗಮನಿಸಿದ್ದೇವೆ.

2ನೇ ಪುಟಕ್ಕೆ...

# ಗಣೇಶ ಮೆರವಣಿಗೆಯಲ್ಲಿ ಗಲಾಟೆ, ಕಲ್ಲುತೂರಾಟ-19 ಜನರ ವಿರುದ್ಧ ಎಫ್‌ಐಆರ್



ಯಾದಗಿರಿ: ಗಣೇಶನ ಮೆರವಣಿಗೆ ವೇಳೆ ಎರಡು ಗುಂಪುಗಳ ನಡುವೆ ಗಲಾಟೆಯಾಗಿ, ಬಳಿಕ ಮಾರಾಮಾರಿಯಾಗಿರುವ ಘಟನೆ ಯಾದಗಿರಿ ನಗರದ ದುಗ- ರ್ದೇವಿ ಮಂದಿರದ ಬಳಿ ನಡೆದಿದೆ. ಈ ಸಂಬಂಧ ಇದೀಗ 19 ಜನರ ವಿರುದ್ಧ ಎಫ್‌ಐಆರ್ ದಾಖಲಾಗಿದೆ.

ಗಣೇಶೋತ್ಸವ ಮೆರವಣಿಗೆ ವೇಳೆ ಒಂದು ಗುಂಪಿನ ಯುವಕನ ಮೇಲೆ ಬೈಕ್ ಹಾದುಹೋಗಿದೆ. ಆಗ ಪರಸ್ಪರ ಮಾತಿಗೆ ಮಾತು ಬೆಳೆದು ಗಲಾಟೆ ಶುರುವಾಗಿದೆ. ಬಳಿಕ ‘ನಮ್ಮ ಏರಿಯಾದಲ್ಲಿ ಗಣೇಶ ಮೂರ್ತಿಯನ್ನು ಹೇಗೆ ಪ್ರತಿಷ್ಠಾಪನೆ ಮಾಡ್ತೀರಾ ನೋಡ್ತೀವಿ, ನಾವು ಹೇಳಿದಂತೆಯೇ ನಡೆಯಬೇಕು’ ಎಂದು ಮತ್ತೊಂದು ಗುಂಪು ಬೆದರಿಕೆ ಹಾಕಿ, ಕಿರಿಕ್ ಮಾಡಿದೆ. ಮಾತು ತಾರಕಕ್ಕೇರಿ ಕಲ್ಲುತೂರಾಟ ಹಾಗೂ ದೊಣ್ಣೆಯಿಂದ ಮಾರಾಮಾರಿ ನಡೆದಿದೆ. ಘಟನೆಯಲ್ಲಿ ಮೂವರು ಗಾಯಗೊಂಡಿದ್ದು, ಆಸ್ಪತ್ರೆಗೆ ದಾಖಲಿಸಲಾಗಿದೆ. ಸದ್ಯ ಯಾದಗಿರಿ ನಗರ ಪೊಲೀಸ್ ಠಾಣೆಯಲ್ಲಿ 19 ಜನರ ವಿರುದ್ಧ ಪ್ರಕರಣ ದಾಖಲಾಗಿದೆ.

ಒಂದನೇ ಪುಟದಿಂದ..

# ಪ್ರಜಾಪ್ರಭುತ್ವದಲ್ಲಿ ಪ್ರಜೆಗಳೇ ಪ್ರಭುಗಳು: ಡಿಕೆಶಿ

ತ್ಯಾಗ, ಇಂದಿರಾಗಾಂಧಿಯವರು, ರಾಜೀವ್‌ಗಾಂಧಿಯವರು ದೇಶಕ್ಕಾಗಿ ಪ್ರಾಣ ತ್ಯಾಗ ಮಾಡಿದರು. ಸೋನಿಯಾಗಾಂಧಿಯವರು ಮಾಡಿದ ಅಧಿಕಾರ ತ್ಯಾಗವನ್ನು ಯಾರಿಂದಲೂ ಮಾಡುವುದಕ್ಕೆ ಆಗಲ್ಲ ಎಂದರು.

ಜನರ ಬದುಕನ್ನು ಸುಧಾರಿಸಿ ಬದಲಾವಣೆ ತರಲು ನಾವು 5 ಗ್ಯಾರಂಟಿಗಳನ್ನು ಬದ್ಧತೆಯಿಂದ ಜಾರಿ ಮಾಡಿದ್ದೇವೆ ಎಂದು ಹೇಳಿದರು.

ರಾಜ್ಯದಲ್ಲಿ ಎಸ್‌ಐಆರ್‌ನಿಂದ 1 ಕೋಟಿ ಜನ ಮತ ಕಳೆದುಕೊಳ್ಳುವ ಪರಿಸ್ಥಿತಿ ಬಂದಿದೆ. 47 ಲಕ್ಷ ಜನರಿಗೆ ನೋಟಿಸ್ ಕೊಟ್ಟಿದ್ದಾರೆ. ಈಗ ಅಗತ್ಯವಾದ ದಾಖಲೆಗಳನ್ನು ಕೊಡುತ್ತಿದ್ದಾ-ರೆ. ರಾಜ್ಯದಲ್ಲಿ ಡಬಲ್ ಇಂಜಿನ್ ಸರ್ಕಾರ ಇದ್ದರೂ ಜನ ನಮಗೆ 136 ಸ್ಥಾನ ಕೊಟ್ಟರು. ಮುಂದೆ ಏನಾಗುತ್ತದೋ ಎಂಬ ಬಗ್ಗೆ ನಾನು ಈಗ ಮಾತನಾಡಲ್ಲ ಎಂದು ಹೇಳಿದರು.

ಸಮಾಜ ಕಲ್ಯಾಣ ಇಲಾಖೆಯ ಎಸ್‌ಸಿಪಿ, ಟಿಎಸ್‌ಪಿ ಯೋಜನೆಯ ಹಣವನ್ನು ಬೇರೆ ಇಲಾಖೆಗೆ ಬಳಸಿಕೊಂಡಿರಬಹುದು. ಆದರೆ ಕೇಂದ್ರ ಸರ್ಕಾರ ರಾಜ್ಯದಂತೆ ಪರಿಶಿಷ್ಟ ಜಾತಿ, ವರ್ಗದ ಯೋಜನೆಗಳಿಗೆ ಹಣ ಕೊಡಲಿ ಎಂದು ಅವರು ಆಗ್ರಹಿಸಿದರು.

ನಾವು ಪ್ರಜಾಪ್ರಭುತ್ವ ಉಳಿಸುವುದಕ್ಕೆ ಬದ್ಧವಾಗಿದ್ದೇವೆ. ಎಲ್ಲಾ ವರ್ಗದವರನ್ನು ಒಟ್ಟಿಗೆ ತೆಗೆದುಕೊಂಡು ಹೋಗುವ ಕೆಲಸ ಮಾಡುತ್ತೇವೆ. ನಮ್ಮ ಪಕ್ಷದ ಸಿದ್ಧಾಂತದಂತೆ ಸರ್ವರಿಗೂ ಸಮಬಾಳು, ಸರ್ವರಿಗೂ ಸಮಪಾಲಿನಂತೆ ಆಡಳಿತ ನಡೆಸುತ್ತೇವೆ. ನಮಗೆ ಮಾನವೀಯತೆ ಮುಖ್ಯ ಎಂದರು.

ರಾಜ್ಯದಲ್ಲಿ ನಿವೇಶನ ಇಲ್ಲದವರಿಗೆ ನಿವೇಶನ ಕೊಡುತ್ತಿದ್ದೇವೆ. ಉಳುವವನಿಗೆ ಭೂಮಿ ಜಾರಿ ಮಾಡಿದ್ದು ಕಾಂಗ್ರೆಸ್, ಗ್ಯಾರಂಟಿ ಕೊಟ್ಟಿದ್ದು ಕಾಂಗ್ರೆಸ್. ಬಿಜೆಪಿಯವರು ಏನು ಮಾಡಿದ್ದಾರೆ ಎಂದು ಅವರು ಪ್ರಶ್ನಿಸಿದರು.

ಜನರ ನಂಬಿಕೆ ಉಳಿಸುವ ಕೆಲಸ ಮಾಡಬೇಕು. ದೇವರ ಅವಕಾಶ ಮಾತ್ರ ಕೊಡುತ್ತಾನೆ. ಕೊಟ್ಟ ಅವಕಾಶವನ್ನು ಜನರಿಗೆ ತಲುಪಿಸಬೇಕು. ಪ್ರಜಾಪ್ರಭುತ್ವ ಉಳಿಸುವುದಕ್ಕೆ ನಾವೆಲ್ಲರೂ ಬದ್ಧ ಎಂದು ಹೇಳಿದರು.

ಇದೇ ಕಾರ್ಯಕ್ರಮದಲ್ಲಿ ಮಾತನಾಡಿದ ಸಮಾಜ ಕಲ್ಯಾಣ ಸಚಿವ ಕೆ.ಹೆಚ್. ಮುನಿಯಪ್ಪ ಅವರು, ಸಂವಿಧಾನ ಕಾಪಾಡುವುದು ಹೇಗೆ, ಅಳವಡಿಸಿಕೊಳ್ಳುವುದರ ಬಗ್ಗೆ ಅರಿವು ಮೂಡಿಸಲಾಗುತ್ತದೆ. ಯೂತ್ ಪಾರ್ಲಿಮೆಂಟ್ ಕಾರ್ಯಕ್ರಮದಲ್ಲಿ ಯುವಕರಿಗೆ ಎಲ್ಲಾ ರೀತಿಯ ತರಬೇತಿ ನೀಡುತ್ತೇವೆ. ನವೆಂಬರ್ ತಿಂಗಳಲ್ಲಿ ಈ ಕಾರ್ಯಕ್ರಮ ನಡೆಯಲಿದೆ ಎಂದರು.

ಯೂತ್ ಪಾರ್ಲಿಮೆಂಟ್ ಕಾರ್ಯಕ್ರಮದ ಮೂಲಕ ಯುವಕರ ಭವಿಷ್ಯ ಉಜ್ವಲವಾಗಿಸೋಣ ಎಂದು ಅವರು ಹೇಳಿದರು.

ರಾಜ್ಯ ಸರ್ಕಾರ ಕ್ರೈಸ್ ವಸತಿ ಶಾಲೆಗಳ ಮೂಲಕ ಬಡ ಮಕ್ಕಳ ವಿದ್ಯಾಭ್ಯಾಸಕ್ಕೆ ಕ್ರಮ ವಹಿಸಿದೆ. ರಾಜ್ಯದಲ್ಲಿ 877 ಶಾಲೆಗಳು ಕಾರ್ಯನಿರ್ವಹಿಸುತ್ತಿವೆ ಎಂದು ಅವರು ತಿಳಿಸಿದರು.

ಪ್ರತಿ ಹೋಬಳಿಯಲ್ಲೂ ಒಂದು ವಸತಿ ಶಾಲೆ ತೆರೆಯಲು ಕ್ರಮ ವಹಿಸಲಾಗುತ್ತಿದೆ. ಸಮಾಜ ಕಲ್ಯಾಣ ಇಲಾಖೆಯ 2 ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿನಿಲಯಗಳು ವಿದ್ಯಾರ್ಥಿಗಳ ಓದಿಗೆ ಸಹಕಾರಿಯಾಗಿವೆ ಎಂದು ಅವರು ಹೇಳಿದರು

ಈ ಕಾರ್ಯಕ್ರಮದಲ್ಲಿ ಯೂರ್ ಪಾರ್ಲಿಮೆಂಟ್‌ನ ಲೋಗೋವನ್ನು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಬಿಡುಗಡೆ ಮಾಡಿದರು.

ಸಮಾಜ ಕಲ್ಯಾಣ ಇಲಾಖೆ ಆಯೋಜಿಸಿ ಈ ಪ್ರಜಾಪ್ರಭುತ್ವ ಕಾರ್ಯಕ್ರಮದಲ್ಲಿ ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್, ಸಚಿವರ ಕೆ.ಹೆಚ್. ಮುನಿಯಪ್ಪ, ಶಿವರಾಜ ತಂಗಡಗಿ ರಿಜ್ವಾನ್ ಹರ್ಷದ್, ಮಾಜಿ ಸಚಿವ ಡಾ. ಹೆಚ್.ಸಿ. ಮಹದೇವಪ್ಪ, ಪಿ.ಟಿ. ಪರಮೇಶ್ವರನಾಯಕ್, ವಿಧಾನ ಪರಿಷತ್ ಸದಸ್ಯ ಡಿ.ಟಿ. ಶ್ರೀನಿವಾಸ್, ಆದಿಜಾಂಬವ ಅಭಿವೃದ್ಧಿ ನಿಗಮದ ಅಧ್ಯಕ್ಷ ಜಿ.ಎಸ್. ಮಂಜುನಾಥ್, ಕರ್ನಾಟಕ ಪರಿಶಿಷ್ಟ ಅಲೆಮಾರಿ ಮತ್ತು ಅರೆಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಜಿ. ಪಲ್ಲವಿ, ಭೋವಿ ನಿಗಮದ ಅಧ್ಯಕ್ಷ ಎಂ. ರಾಮಪ್ಪ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

# ಶೇಖ್ ಹಸೀನಾ ಪಕ್ಷದ 7 ನಾಯಕರಿಗೆ ಮರಣದಂಡನೆ

ತಪ್ಪಿತಸ್ಥರೆಂದು ಕೋರ್ಟ್ ಘೋಷಿಸಿದೆ.

ಶಿಕ್ಷೆಗೆ ಒಳಗಾದವರಲ್ಲಿ ಪಕ್ಷದ ಮಾಜಿ ಪ್ರಧಾನ ಕಾರ್ಯದರ್ಶಿ ಒಬೈದುಲ್ ಕ್ವಾದರ್ ಹಾಗೂ ಮಾಜಿ ಸಚಿವ ಮೊಹಮ್ಮದ್ ಅಲಿ ಅರಾಫತ್ ಸೇರಿದ್ದಾರೆ. ನ್ಯಾಯಮೂರ್ತಿ ನಜ್ರುಲ್ ಇಸ್ಲಾಂ ಚೌಧರಿ ನೇತೃತ್ವದ ಮೂವರು ಸದಸ್ಯರ ನ್ಯಾಯಮಂಡಳಿಯು ಇವರಿಗೆ ಶಿಕ್ಷೆ ವಿಧಿಸಿತು.

ವಿಶ್ವಸಂಸ್ಥೆಯ ಪ್ರಕಾರ, 2024ರ ಜುಲೈ ಮತ್ತು ಆಗಸ್ಟ್ ನಡುವೆ ಹಸೀನಾ ಅವರ ಸರ್ಕಾರವು ವಿದ್ಯಾರ್ಥಿ ನೇತೃತ್ವದ ದಂಗೆಯನ್ನು ಹತ್ತಿಕ್ಕಲು ಪ್ರಯತ್ನಿಸಿದಾಗ 1,400ಕ್ಕೂ ಹೆಚ್ಚು ಜನರು ಸಾವನ್ನಪ್ಪಿದರು. ಹಸೀನಾ ಅವರ 15 ವರ್ಷಗಳ ಆಳ್ವಿಕೆಯು 2024ರ ಆಗಸ್ಟ್‌ನಲ್ಲಿ ಅಂತ್ಯಗೊಂಡಿತು. ಆ ಸಮಯದಲ್ಲಿ ಅವರು ಹೆಲಿಕಾಪ್ಟರ್ ಮೂಲಕ ನೆರೆಯ ಭಾರತಕ್ಕೆ ಪಲಾಯನ ಮಾಡಿದರು. ಈಗ ಭಾರತದಲ್ಲೇ ಅಜ್ಞಾತವಾಸದಲ್ಲಿದ್ದಾರೆ.

# ಉಮರ್ ಖಾಲಿದ್ ರಾಷ್ಟ್ರೀಯವಾದಿ:

## ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ವಿವಾದ

ನಲ್ಲಿ ಉಮರ್ ಖಾಲಿದ್ ಸಾಕ್ಷ್ಯ ಚಿತ್ರ ಪ್ರದರ್ಶನಕ್ಕೆ ಎಬಿವಿಪಿ ವಿರೋಧ ವಿಚಾರಕ್ಕೆ ವಿಧಾನಸೌಧದಲ್ಲಿ ಪ್ರತಿಕ್ರಿಯೆ ನೀಡಿದ ಅವರು, ಉಮರ್ ಖಾಲಿದ್ ರಾಷ್ಟ್ರೀಯವಾದಿ. ಎಬಿವಿಪಿಗೆ ಉಮರ್ ಖಾಲಿದ್ ಬಗ್ಗೆ ಮಾತನಾಡಲು ಯಾವುದೇ ಹಕ್ಕಿಲ್ಲ ಅಂತ ಸಿಟ್ಟು ಹೊರಹಾಕಿದರು. ಎಬಿವಿಪಿ ನಾಥೂರಾಮ್ ಗೋಡ್ಸೆಯನ್ನು ಆರಾಧಿಸುತ್ತದೆ. ನಾಥೂರಾಮ್ ಗೋಡ್ಸೆ ದೇಶ ವಿರೋಧಿ ದೇಶದ ಮೊದಲ ಭಯೋತ್ಪಾದಕ. ಉಮರ್ ಖಾಲಿದ್ ಬಗ್ಗೆ ಮಾತನಾಡಲು ಎವಿವಿಪಿ ಅವರಿಗೆ ಯಾವುದೇ ನೈತಿಕತೆ ಇಲ್ಲ ಎಂದು ವಾಗ್ದಾಳಿ ನಡೆಸಿದರು.

# 'ವಂದೇ ಮಾತರಂ' ಮೊದಲ ಎರಡು ಚರಣಗಳಿಗೆ ಸೀಮಿತ

ಗಿರೀಶ್ ಭಾರದ್ವಾಜ್ ಅವರು ಸಲ್ಲಿಸಿರುವ ಅರ್ಜಿಯಲ್ಲಿ, 'ರಾಷ್ಟ್ರಗೀತೆ'ಯಂತಹ ರಾಷ್ಟ್ರೀಯ ಸಂಕೇತದ ಸ್ವರೂಪ ಮತ್ತು ವಿಷಯವನ್ನು ರಾಜ್ಯ ಸರ್ಕಾರವು ಕಾರ್ಯಾಂಗ ಆದೇಶದ ಮೂಲಕ ನಿಗದಿಪಡಿಸಬಹುದೇ ಎಂಬ ಪ್ರಶ್ನೆಯನ್ನು ಎತ್ತಲಾಗಿದೆ. ಈ ಅರ್ಜಿಯನ್ನು ವಕೀಲ ಅಂಗದ್ ಕಾಮತ್ ಅವರ ಮೂಲಕ ಸಲ್ಲಿಸಲಾಗಿದ್ದು, ಇಂದು ಹೈಕೋರ್ಟ್‌ನಲ್ಲಿ ವಿಚಾರ ಪ್ರಸ್ತಾಪಗೊಂಡು ವಿಚಾರಣೆಗೆ ಪಟ್ಟಿ ಮಾಡುವ ಸಾಧ್ಯತೆ ಇದೆ.

ಸೆಪ್ಟೆಂಬರ್ 8ರಂದು ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ರಾಜಕೀಯ) ಹೊರಡಿಸಿದ ಸರ್ಕಾರಿ ಆದೇಶವನ್ನು ಅರ್ಜಿಯಲ್ಲಿ ಪ್ರಶ್ನಿಸಲಾಗಿದೆ. ರಾಜ್ಯ ಸರ್ಕಾರದ ಎಲ್ಲ ಕಾರ್ಯಕ್ರಮಗಳಲ್ಲಿ 'ವಂದೇ ಮಾತರಂ'ನ ಸಂಕ್ಷಿಪ್ತ ರೂಪವನ್ನು ಹಾಡಬೇಕು ಎಂದು ಆದೇಶದಲ್ಲಿ ಸೂಚಿಸಲಾಗಿದೆ. ಸೆಪ್ಟೆಂಬರ್ 3ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ತೆಗೆದುಕೊಂಡ ನಿರ್ಧಾರದ ಅನುಸಾರ ಈ ಆದೇಶ ಹೊರಡಿಸಲಾಗಿದೆ.

ರಾಷ್ಟ್ರಗೀತೆಗೆ ಸಂಬಂಧಿಸಿದ ಕೇಂದ್ರ ಸರ್ಕಾರದ ಆದೇಶಗಳಿಗೆ ಈ ರಾಜ್ಯ ಸರ್ಕಾರದ ಆದೇಶ ನೇರವಾಗಿ ವಿರುದ್ಧವಾಗಿದೆ ಎಂದು ಪಿಐಎಲ್‌ನಲ್ಲಿ ವಾದಿಸಲಾಗಿದೆ. ಕೇಂದ್ರ ಸರ್ಕಾರದ ಆದೇಶದಲ್ಲಿ 'ವಂದೇ ಮಾತರಂ'ನ ಆರು ಚರಣಗಳ ಸಂಪೂರ್ಣ ಸಂಯೋಜನೆಯನ್ನೇ ಅಧಿಕೃತ ರೂಪ ಎಂದು ಪರಿಗಣಿಸಲಾಗಿದ್ದು, ಮೊದಲ ಎರಡು ಚರಣಗಳಿಗೆ ಮಾತ್ರ ಸೀಮಿತಗೊಳಿಸಲಾಗಿಲ್ಲ ಎಂದು ಅರ್ಜಿಯಲ್ಲಿ ಹೇಳಲಾಗಿದೆ.

# ದೇಶಗಳಲ್ಲಿ ಶಾಂತಿಯುತ ವಾತಾವರಣವಿದೆ: ಪರಂ

ಆದರೆ, ನಮ್ಮ ದೇಶದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಅವರು ಹಾಕಿಕೊಟ್ಟಿರುವ ಅಡಿಪಾಯ ಭದ್ರವಾಗಿರುವುದರಿಂದ ಪ್ರಜಾಪ್ರಭುತ್ವಕ್ಕೆ ಧಕ್ಕೆಯಾಗುವಂತಹ ಬೆಳವಣಿಗೆಗೆ ಗೆಲುವು ಸಿಕ್ಕಿಲ್ಲ ಎಂದರು.

ದೇಶದ ಜನಸಂಖ್ಯೆಯಲ್ಲಿ ಶೇ. 65ರಷ್ಟು ಯುವ ಸಮುದಾಯವಿದೆ. 16–35 ವಯೋಮಾನದ ಸಮುದಾಯವಿದು. ಇವರು ಮುಂದಿನ ಭವಿಷ್ಯವನ್ನು ನಿರ್ಮಿಸುವವರು. ಈಗ ಜೆನ್–ಝೀ ಮುನ್ನೆಲೆಗೆ ಬಂದಿದೆ. ಇವರಿಗೆ ನಾವು ಪ್ರಾಮುಖ್ಯತೆ ನೀಡಬೇಕಿದೆ. ಉತ್ತಮ ರಾಜಕೀಯ ವ್ಯವಸ್ಥೆಯನ್ನು ಅವರಿಗೆ ಹಸ್ತಾಂತರಿಸುವ ಜವಾಬ್ದಾರಿ ನಮ್ಮ ಮೇಲಿದೆ. ಹಾಗಾಗಿ, ಅವರಿಗೆ ಸಂವಿಧಾನ ಮತ್ತು ಪ್ರಜಾಪ್ರಭುತ್ವದ ಮೌಲ್ಯಗಳನ್ನು ಧಾರೆಯೆರೆಯಬೇಕಿದೆ. ಈ ನಿಟ್ಟಿನಲ್ಲಿ ನಮ್ಮ ಸರ್ಕಾರ ಸಾಕಷ್ಟು ಕೆಲಸಗಳನ್ನು ನಿರಂತರವಾಗಿ ನಡೆಸುತ್ತ ಬಂದಿದೆ. ಪ್ರತಿಯೊಂದು ಶಾಲಾ–ಕಾಲೇಜುಗಳಿಗೆ, ಮನೆಗಳಿಗೆ ಸಂವಿಧಾನದ ಪೀಠಿಕೆಯನ್ನು ತಲುಪಿಸಿದ್ದೇವೆ. ನಿರಂತರವಾಗಿ ಸಂವಿಧಾನದ ಪೀಠಿಕೆಯನ್ನು ಮನನ ಮಾಡಿಕೊಳ್ಳುವ ಮೂಲಕ ವಿದ್ಯಾರ್ಥಿಗಳಲ್ಲಿ ಪ್ರಜಾಪ್ರಭುತ್ವದ ಪ್ರಾಮುಖ್ಯತೆಯನ್ನು ಅರ್ಥೈಸಿಕೊಳ್ಳುವಂತೆ ಮಾಡುತ್ತಿದ್ದೇವೆ ಎಂದರು.

# ಹಿಂದೂ–ಮುಸ್ಲಿಂ ಬಾಂಧವರಿಂದ ಗಣೇಶ ಪ್ರತಿಷ್ಠಾಪನೆ

## ಗಣೇಶೋತ್ಸವದ ಮೂಲಕ ಭಾವೈಕ್ಯತೆ, ಸೌಹಾರ್ದತೆಗೆ ನಾಂದಿ

ಹರಿಹರ : ಜಾತಿ–ಧರ್ಮದ ಎಲ್ಲೆಗಳನ್ನು ಮೀರಿ ಹಿಂದೂ ಹಾಗೂ ಮುಸ್ಲಿಂ ಬಾಂಧವರು ಒಗ್ಗೂಡಿ ಗಣೇಶನನ್ನು ಪ್ರತಿಷ್ಠಾಪಿಸಿ, ಪೂಜೆ ಸಲ್ಲಿಸುವ ಮೂಲಕ ಸಹೋದರತ್ವ, ಸೌಹಾರ್ದತೆ ಹಾಗೂ ಮಾನವೀಯತೆಯ ಸಂದೇಶ ಸಾರಿದ ಅಪರೂಪದ ಘಟನೆ ನಗರದಲ್ಲಿ ನಡೆಯಿತು.



ನಗರದ ತುಂಗಭದ್ರಾ ಲಾರಿ ಚಾಲಕರ ಮತ್ತು ಕ್ಲೀನರ್‌ಗಳ ಶ್ರೇಯೋಭಿವೃದ್ಧಿ ಸಂಘದ ಪದಾಧಿಕಾರಿಗಳು ಹಾಗೂ ಸದಸ್ಯರು ಒಗ್ಗೂಡಿ ಮಂಗಳವಾರ 3ನೇ ವರ್ಷದ ಗಣೇಶ ಮಹೋತ್ಸವವನ್ನು ಆಚರಿಸಿದರು. ಹಿಂದೂ–ಮುಸ್ಲಿಂ ಸಮುದಾಯದ ಸದಸ್ಯರು ಯಾವುದೇ ಭೇದಭಾವವಿಲ್ಲದೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಗಣೇಶನ ಪ್ರತಿಷ್ಠಾಪನೆ ಹಾಗೂ ಪೂಜಾ ಕೈಂಕರ್ಯಗಳನ್ನು ನೆರವೇರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಂಘದ ಅಧ್ಯಕ್ಷ ಸೈಯದ್ ಯೂಸುಫ್, ಕಳೆದ ಮೂರು ವರ್ಷಗಳಿಂದ ಸಂಘದ ವತಿಯಿಂದ ಗಣೇಶೋತ್ಸವವನ್ನು ಆಚರಿಸಿಕೊಂಡು ಬರಲಾಗುತ್ತಿದೆ. ಸಂಘದ ಹಿಂದೂ–ಮುಸ್ಲಿಂ ಸದಸ್ಯರ ಸಂಪೂರ್ಣ ಸಹಕಾರ ಹಾಗೂ ಸಹಭಾಗಿತ್ವದಿಂದಲೇ ಈ ಆಚರಣೆ ಸೌಹಾರ್ದಯುತವಾಗಿ ನಡೆಯುತ್ತಿದೆ. ಮುಂದಿನ ದಿನಗಳಲ್ಲಿಯೂ ಇದೇ ರೀತಿಯ ಭಾವೈಕ್ಯತೆಯನ್ನು ಮುಂದುವರಿಸಿಕೊಂಡು ಹೋಗಲಾಗುವುದು ಎಂದು ತಿಳಿಸಿದರು.

ವಕೀಲರ ಸಂಘದ ಅಧ್ಯಕ್ಷ ಗಣೇಶ್ ದುರ್ಗದ್ ಮಾತನಾಡಿ, ಇಂದಿನ ದಿನಗಳಲ್ಲಿ ಜಾತಿ ಧರ್ಮದ ಹೆಸರಿನಲ್ಲಿ ಗದ್ದಲ, ಗಲಾಟೆಗಳು ನಡೆಯುತ್ತಿರುವುದು ವಿಷಾದನೀಯ. ಇಂತಹ ಸಂದರ್ಭದಲ್ಲಿ ಸಂಘದ ಸದಸ್ಯರು 3 ವರ್ಷಗಳಿಂದ ಹಿಂದೂ ಮುಸ್ಲಿಂ ಬಾಂಧವರು ಒಟ್ಟಾಗಿ ಗಣೇಶನ ಪ್ರತಿಷ್ಠಾಪನೆ ಮಾಡುವ ಮೂಲಕ ಸಮಾಜಕ್ಕೆ ಭಾವೈಕ್ಯತೆ ಹಾಗೂ ಸೌಹಾರ್ದತೆಯ ಸಂದೇಶ ನೀಡುತ್ತಿರುವುದು ಶ್ಲಾಘನೀಯ ಎಂದರು.

ಹಿರಿಯ ಕಾರ್ಮಿಕ ಮುಖಂಡ ಹೆಚ್.ಕೆ.ಕೊಟ್ರಪ್ಪ ಮಾತನಾಡಿ, ಗಣೇಶ ಚತುರ್ಥಿ ಕೇವಲ ದೇವರ ಆರಾಧನೆಗೆ ಸೀಮಿತವಾದ ಹಬ್ಬವಲ್ಲ. ಎಲ್ಲರೂ ಒಂದೆಡೆ ಸೇರಿ ಪರಸ್ಪರ ಪ್ರೀತಿ, ಸಹೋದರತ್ವ ಹಾಗೂ ಒಗ್ಗಟ್ಟನ್ನು ಸಾರುವ ಸಂದರ್ಭವಾಗಿದೆ. ಜಾತಿ ಧರ್ಮದ ಮೇಲು ಕೀಳು ಭಾವನೆಗಳನ್ನು ಬದಿಗೊತ್ತಿ ನಾವೆಲ್ಲರೂ ಒಂದೇ ಎಂಬ ಮನೋಭಾವ ಬೆಳೆಸಿಕೊಳ್ಳ ಬೇಕಾಗಿದೆ. ಮುಸ್ಲಿಂ ಬಾಂಧವರು ಗಣೇಶೋತ್ಸವದಲ್ಲಿ ನಮ್ಮೊಂದಿಗೆ ಪಾಲ್ಗೊಳ್ಳುತ್ತಿರುವುದು ಸಂತಸದ ಹಾಗೂ ಮಾದರಿಯಾದ ಸಂಗತಿ ಎಂದು ಹೇಳಿದರು.

ಇದೇ ವೇಳೆ ಮುಂದಿನ ದಿನಗಳಲ್ಲಿ ಹರಿಹರ ನಗರದಲ್ಲಿ ಆಚರಿಸಲ್ಪಡುವ ಮುಸ್ಲಿಂ ಬಾಂಧವರ ಈದ್ ಮಿಲಾದ್, ಹಿಂದೂಗಳ ಗಣೇಶೋತ್ಸವ ಹಾಗೂ ಕ್ರೈಸ್ತರ ಮೇರಿ ಜಾತ್ರೆ ಸೇರಿದಂತೆ ಎಲ್ಲ ಧರ್ಮಗಳ ಪ್ರಮುಖ ಹಬ್ಬಗಳನ್ನು ಪರಸ್ಪರ ಸಹಕಾರ ದೊಂದಿಗೆ ವಿಜೃಂಭಣೆಯಿಂದ ಆಚರಿಸುವ ನಿರ್ಧಾರವನ್ನು ಸಂಘದ ಪದಾಧಿಕಾರಿಗಳು ಹಾಗೂ ಸದಸ್ಯರು ಕೈಗೊಂಡಿದ್ದಾರೆ. ಅದರಂತೆ ಮುಂದಿನ ದಿನಗಳಲ್ಲಿಯೂ ಎಲ್ಲರೂ ಒಗ್ಗೂಡಿ ಹಬ್ಬಗಳನ್ನು ಆಚರಿಸುವ ಮೂಲಕ ಸೌಹಾರ್ದತೆಗೆ ಮತ್ತಷ್ಟು ಬಲ ತುಂಬುಲು ನಿರ್ಧರಿಸಿದ್ದಾರೆ .

ಮಂಗಳವಾರ ಬೆಳಗ್ಗೆಯಿಂದಲೇ ಹಿಂದೂ ಮುಸ್ಲಿಂ ಸಮುದಾಯದ ಸದಸ್ಯರು ಒಟ್ಟಾಗಿ ಸೇರಿ ಪುರೋಹಿತರ ನೇತೃತ್ವದಲ್ಲಿ ವಿನಾಯಕನ ಪ್ರತಿಷ್ಠಾಪನೆ, ವಿಶೇಷ ಪೂಜೆ ಹಾಗೂ ವಿವಿಧ ಧಾರ್ಮಿಕ ಕೈಂಕರ್ಯಗಳನ್ನು ನೆರವೇರಿಸಿದರು. ಬಳಿಕ ಸಾರ್ವಜನಿಕರಿಗೆ ಪ್ರಸಾದ ವಿನಿಯೋಗ ಮಾಡಲಾಯಿತು.

ಈ ಸಮಯದಲ್ಲಿ ಸಂಘದ ಗೌರವಾಧ್ಯಕ್ಷ ರಾಜು ಬಸಪ್ಪ, ಕಾರ್ಯದರ್ಶಿ ಜಂಬಯ್ಯ ಮಡಿವಾಳ, ವಕೀಲ ಶಶಿ ನಾಯಕ್, ಪದಾಧಿಕಾರಿಗಳಾದ ಮೊಹಮ್ಮದ್ ರಫೀಕ್, ಇಮ್ರಾನ್, ಸೈಯದ್ ಮೆಹಬೂಬ್, ಹುಸೇನ್ ಸಾಬ್ ಜವಳಿ, ಬೀರಪ್ಪ, ರಮೇಶ್, ಮಾರುತಿ, ಸಂಘದ ಸದಸ್ಯರು ಸೇರಿದಂತೆ ನೂರಾರು ಜನ ಸಾರ್ವಜನಿಕರು ಉಪಸ್ಥಿತರಿದ್ದರು.

# ಭದ್ರ ನೀರಿಗಾಗಿ ಬಿಜೆಪಿಯಿಂದ ರಸ್ತೆ ತಡೆದು ಪ್ರತಿಭಟನೆ



ದಾವಣಗೆರೆ: ಭದ್ರ ಜಲಾಶಯದಿಂದ ಬಲದಂಡೆ ನಾಲೆಗೆ ನೀರು ಹರಿಸುವಂತೆ ಆಗ್ರಹಿಸಿ ಬಿಜೆಪಿ ಹಾಗೂ ರೈತ ಒಕ್ಕೂಟ ಸೇರಿ ದಾವಣಗೆರೆ ಹೊರ ವಲಯದ ಬಾಡ ಕ್ರಾಸ್ ಬಳಿ ರಸ್ತೆ ತಡೆದು ಪ್ರತಿಭಟನೆ ನಡೆಯುತ್ತಿದೆ. ಮಾಜಿ ಸಚಿವ ಎಂ.ಪಿ ರೇಣುಕಾಚಾರ್ಯ ನೇತೃತ್ವದಲ್ಲಿ ರೈತರು ರಾಷ್ಟ್ರೀಯ ಹೆದ್ದಾರಿ 48ರಲ್ಲಿ ಪ್ರತಿಭಟನೆ ನಡೆಸುತ್ತಿದ್ದಾರೆ. ಅಪ್ಪರ್ ಭದ್ರಗೆ ಮೂರು ಟಿಎಂಸಿ ನೀರು ಬಿಟ್ಟು ಭದ್ರ ಅಚ್ಚು ಕಟ್ಟು ಪ್ರದೇಶದ ರೈತರಿಗೆ ಸರ್ಕಾರ ಅನ್ಯಾಯ ಮಾಡಿದೆ. ಮಳೆ ಇಲ್ಲದೇ ತೋಟ, ಬೆಳೆಗಳು, ಭತ್ತ ಒಣಗುತ್ತಿವೆ. ಕೆರೆಗಳು ಬತ್ತಿ ಅಂತರ್ಜಲ ಮಟ್ಟ ಕುಸಿದಿದೆ ಎಂದು ರೈತರು ಆಕ್ರೋಶ ಹೊರಹಾಕಿದ್ದಾರೆ. ಭದ್ರ ಬಲ ದಂಡೆ ನಾಲೆಗೆ ನೀರು ಹರಿಸಬೇಕು ಎಂದು ರೈತರು ಆಗ್ರಹಿಸಿದ್ದಾರೆ.

# ನಾಳೆ ವಿಶ್ವ ಆತ್ಮಹತ್ಯೆ ತಡೆಗಟ್ಟುವ ದಿನಾಚರಣೆ

ವಿಜಯನಗರ : ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ವಿಭಾಗ, ಜಿಲ್ಲಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ನಗರಸಭೆ ಇವರ ಸಹಯೋಗದಲ್ಲಿ ಸೆಪ್ಟೆಂಬರ್ 16 ರಂದು ಬೆಳಗ್ಗೆ 10 ಗಂಟೆ–ಗೆ ನಗರಸಭೆ ಸಭಾಂಗಣದಲ್ಲಿ ವಿಶ್ವ ಆತ್ಮಹತ್ಯೆ ತಡೆಗಟ್ಟುವ ದಿನಾಚರಣೆ ಆಯೋಜಿಸಲಾಗಿದೆ.

ಪ್ರಧಾನ ಸಿವೀಲ್ ನ್ಯಾಯಾಧೀಶರು ಪ್ರಶಾಂತ್ ನಾಲಪುರ ಉದ್ಘಾಟನೆ ಮಾಡುವರು. ನಗರಸಭೆ ಅಧ್ಯಕ್ಷರು ರೂಪೇಶ್ ಕುಮಾರ್ ಅಧ್ಯಕ್ಷತೆ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ನಗರಸಭೆ ಪೌರಾಯುಕ್ತ ಎರಗುಡಿ ಶಿವಕುಮಾರ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಲಿಂಗರಾಜು, ಹಿರಿಯ ವಕೀಲರು ಹಾಗೂ ಎಮ್.ಎಮ್.ಸಿ ಸದಸ್ಯರು ಕೆ. ಜಂಬಣ್ಣ, ಜಿಲ್ಲಾ ಆರ್.ಸಿ. ಹೆಚ್ ಅಧಿಕಾರಿ ಡಾ.ಜಂಬಯ್ಯ, ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ.ಸತೀಶ್ ಚಂದ್ರು, ಜಿಲ್ಲಾ ಕುಟುಂಬ ಕಲ್ಯಾಣ ಕಾರ್ಯಕ್ರಮ ಅನುಷ್ಠಾನ ಅಧಿಕಾರಿ ಡಾ.ವಿನಯ್, ಜಿಲ್ಲಾ ಕ್ಷಯರೋಗ ನಿಯಂತ್ರಣಾಧಿಕಾರಿ ಡಾ. ಡಿ.ಭಾಸ್ಕರ್, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ. ವಿನೋದ್ ಭಾಗವಹಿಸಲಿದ್ದಾರೆ.

# ಕೋಲ್ಕತ್ತಾದ 'ಶಿವ ಶಕ್ತಿಧಾಮ' ಮಾದರಿಯ ಮಂಟಪದಲ್ಲಿ ಹಿಂದೂ ಮಹಾಗಣಪತಿ

ದಾವಣಗೆರೆ: ಹಿಂದೂ ಮಹಾಗಣಪತಿಗಾಗಿ ಈ ಬಾರಿ ವಿಶೇಷವಾಗಿ ಕೋಲ್ಕತ್ತಾದ 'ಶಿವ ಶಕ್ತಿಧಾಮ' ದೇಗುಲದ ಮಾದರಿಯ ಮಂಟಪ ಸಿದ್ಧಪಡಿಸಲಾಗಿದ್ದು, ಭಕ್ತರನ್ನು ಆಕರ್ಷಿಸುತ್ತಿದೆ. ಕೇಂದ್ರ ಮಹಾಮಂಟಪದಲ್ಲಿ ನಿಂತಿರುವ ಭಂಗಿಯಲ್ಲಿ ಬೃಹತ್ ಪಂಚಮುಖಿ ಗಣೇಶನನ್ನು ಹಿಂದೂ ಮಹಾಗಣಪತಿ ಟ್ರಸ್ಟ್ ಸೋಮವಾರ ಪ್ರತಿಷ್ಠಾಪಿಸಿದೆ. ಕಳೆದ ಬಾರಿ ಬದರಿನಾಥ್ ದೇವಾಲಯ ಮಾದರಿಯ ಮಂಟಪದಲ್ಲಿ ಹಿಂದೂ ಮಹಾಗಣಪತಿ ವಿರಾಜಮಾನರಾಗಿದ್ದರು.



ಕೋಲ್ಕತ್ತಾದ 'ಶಿವ ಶಕ್ತಿಧಾಮ' ಮಾದರಿಯ ಮಂಟಪದಲ್ಲಿ ಹಿಂದೂ ಮಹಾಗಣಪತಿ ಶಕ್ತಧಾಮ ದೇಗುಲದ ಮಹಾಮಂಟಪದ ವಿಶೇಷಗಳಿವು! ಪಶ್ಚಿಮ ಬಂಗಾಳದ ಕೋಲ್ಕತ್ತಾದ 20–30 ಕಾರ್ಮಿಕರು ಕಾರ್ಮಿಕರ ಕೈಯಲ್ಲಿ ಈ ಬೃಹತ್ ಮಹಾಮಂಟಪ ಸಿದ್ಧವಾಗಿದೆ.

# ಪಂಚಮಸಾಲಿ ಸಂಘದ ಸಭೆಗೆ ಬಂದು ಸಲಹೆ ಕೊಡಿ : ಮಾಜಿ ಅಧ್ಯಕ್ಷ

ಹೊಸಪೇಟೆ : ಕರ್ನಾಟಕ ರಾಜ್ಯ ವೀರಶೈವ ಲಿಂಗಾಯತ ಪಂಚಮಸಾಲಿ ಸಂಘದ 2025–26ನೇ ಸಾಲಿನ ವಾರ್ಷಿಕ ಸಾಮಾನ್ಯ ಮಹಾಸಭೆ ಇದೇ 19ರಂದು ಹಾವೇರಿಯ ಶ್ರೀ ಶಿವಬಸವೇಶ್ವರ ಕಲ್ಯಾಣ ಮಂಟಪದಲ್ಲಿ ಆಯೋಜಿಸಲಾಗಿದೆ. ಸಂಘದ ಸದಸ್ಯರು ಯಾವುದೇ ಗೊಂದಲ ಅಥವಾ ಅಪಪ್ರಚಾರಗಳಿಗೆ ಕಿವಿಗೊಡದೆ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಸಂಘದ ನಿಕಟಪೂರ್ವ ಅಧ್ಯಕ್ಷರು ಮನವಿ ಮಾಡಿದ್ದಾರ.



ಇಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ನಿಕಟಪೂರ್ವ ಅಧ್ಯಕ್ಷರಾದ ಬಾವಿ ಬೆಟ್ಟಪ್ಪ, ಬಸವರಾಜ್ ದಿಂಡೂರು, ನಾಗನಗೌಡ ಹಾಗೂ ಜಿ.ಪಿ. ಪಾಟೀಲ್, ಕರ್ನಾಟಕ ರಾಜ್ಯ ವೀರಶೈವ ಲಿಂಗಾಯತ ಪಂಚಮಸಾಲಿ ಸಂಘವು ಯಾವುದೇ ವ್ಯಕ್ತಿ ಅಥವಾ ವೈಯಕ್ತಿಕ ಹಿತಾಸಕ್ತಿಗಾಗಿ ಸ್ಥಾಪನೆಯಾದ ಸಂಸ್ಥೆಯಲ್ಲ. ಇದು ಇಡೀ ಸಮಾಜದ ಸಮಗ್ರ ಅಭಿವೃದ್ಧಿಯನ್ನು ಉದ್ದೇಶವಾಗಿಟ್ಟುಕೊಂಡು ರೂಪುಗೊಂಡ ಸಂಘ ಎಂದರು.

ಇತ್ತೀಚಿನ ದಿನಗಳಲ್ಲಿ ಹರಿಹರ ಪೀಠದಲ್ಲಿ ನಡೆದ ಕೆಲವು ಘಟನೆಗಳಿಂದ ಸಮಾಜದ ಜನರಲ್ಲಿ ಗೊಂದಲ ಉಂಟಾಗಿದೆ.

ಕೆಲವು ಪಟ್ಟಭದ್ರ ಹಿತಾಸಕ್ತಿಗಳು ಪೀಠ, ಟ್ರಸ್ಟ್ ಹಾಗೂ ಸಂಘದ ವಿಚಾರಗಳನ್ನು ಪರಸ್ಪರ ಜೋಡಿಸಿ ಗೊಂದಲ ಸೃಷ್ಟಿಸುವ ಮತ್ತು ಅಪಪ್ರಚಾರ ಮಾಡುವ ಯತ್ನ ನಡೆಸುತ್ತಿವೆ ಎಂದು ಅವರು ಆರೋಪಿಸಿದರು.

# ಬಳ್ಳಾರಿಯಲ್ಲಿ ಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ

## ಪ್ರಜಾಪ್ರಭುತ್ವ ಉಳಿಸಲು ಯುವಜನತೆ ನಾಯಕತ್ವ ಗುಣ ಬೆಳೆಸಿಕೊಳ್ಳಿ: ಮುಂಡರಗಿ ನಾಗರಾಜ



ಬಳ್ಳಾರಿ, ಸೆ.15: ಪ್ರಜಾಪ್ರಭುತ್ವ ಮತ್ತು ಸಂವಿಧಾನದ ಮೌಲ್ಯಗಳನ್ನು ಎತ್ತಿಹಿಡಿಯುವ ಜವಾಬ್ದಾರಿ ಇಂದಿನ ಯುವಜನತೆಯ ಮೇಲಿದೆ. ಯುವಕರು ಮೊಬೈಲ್ ಹಾಗೂ ಸಾಮಾಜಿಕ ಜಾಲತಾಣಗಳ ಅತಿಯಾದ ಬಳಕೆಯಿಂದ ದೂರವಿದ್ದು, ಪುಸ್ತಕ ಓದುವ ಹವ್ಯಾಸದ ಜೊತೆಗೆ ನಾಯಕತ್ವ, ಆತ್ಮವಿಶ್ವಾಸ ಹಾಗೂ ಸಂವಹನ ಕೌಶಲ್ಯ ಬೆಳೆಸಿಕೊಳ್ಳಬೇಕು ಎಂದು ಡಾ. ಬಾಬು ಜಗಜೀವನರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜ ಕರೆ ನೀಡಿದರು.

ನಗರದ ಡಾ. ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಸಮಾಜ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಆಯೋಜಿಸಿದ್ದ ಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಹಾಗೂ 'ಯುವ ಸಂಸತ್ತು' ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಡಾ. ಬಿ.ಆರ್. ಅಂಬೇಡ್ಕರ್ ಅವರ ನೇತೃತ್ವದಲ್ಲಿ ರೂಪುಗೊಂಡ ಸಂವಿಧಾನ ಪ್ರತಿಯೊಬ್ಬ ಪ್ರಜೆಗೂ ಸಮಾನ ಮತದಾನದ ಹಕ್ಕು ನೀಡಿದೆ. ಸಂವಿಧಾನದಿಂದ ಸಾಮಾಜಿಕ, ಆರ್ಥಿಕ ಹಾಗೂ ರಾಜಕೀಯ ಸಮಾನತೆ ಸಾಧ್ಯವಾಗಿದ್ದು, ಯುವಜನತೆ ಅದರ ಆಶಯಗಳನ್ನು ಅರಿತು ಮುನ್ನಡೆಯಬೇಕು ಎಂದರು.

ಮಹಾನಗರ ಪಾಲಿಕೆ ಮಹಾಪೌರ ಪಿ. ಗಾದೆಪ್ಪ ಮಾತನಾಡಿ, ದೇಶದ ಪ್ರತಿಯೊಬ್ಬ ನಾಗರಿಕರೂ ಸ್ವಾತಂತ್ರ್ಯ, ಸಮಾನತೆ ಹಾಗೂ ಹಕ್ಕುಗಳೊಂದಿಗೆ ಬದುಕಲು ಸಂವಿಧಾನವೇ ಮೂಲ ಕಾರಣವಾಗಿದೆ. ಜಿಲ್ಲಾಧಿಕಾರಿ ಕೆ. ನಾಗೇಂದ್ರ ಪ್ರಸಾದ್ ಮಾತನಾಡಿ, ಪ್ರಜಾಪ್ರಭುತ್ವದಲ್ಲಿ ಜನರೇ ಕೇಂದ್ರಬಿಂದು. ಪ್ರತಿಯೊಬ್ಬ ನಾಗರಿಕರೂ ಚುನಾವಣೆಯಲ್ಲಿ ತಪ್ಪದೇ ಮತ ಚಲಾಯಿಸುವ ಮೂಲಕ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಬಲಪಡಿಸಬೇಕು ಎಂದರು. ಜಿಲ್ಲಾ ಪಂಚಾಯತ್ ಸಿಇಒ ಮಹಮ್ಮದ್ ಹಾರೀಸ್ ಸುಮೇರ್ ಮಾತನಾಡಿ, ಪ್ರಜಾಪ್ರಭುತ್ವ ಕೇವಲ ಮತದಾನಕ್ಕೆ ಸೀಮಿತವಲ್ಲ; ಸಾಮಾಜಿಕ, ಆರ್ಥಿಕ ಹಾಗೂ ರಾಜಕೀಯ ನ್ಯಾಯ ಅದರ ಪ್ರಮುಖ ಅಂಶಗಳಾಗಿವೆ. ಹಕ್ಕುಗಳ ಜೊತೆಗೆ ನಾಗರಿಕರು ತಮ್ಮ ಕರ್ತವ್ಯಗಳನ್ನೂ ಪಾಲಿಸಬೇಕು ಎಂದರು.

ಕಾರ್ಯಕ್ರಮದಲ್ಲಿ ಕಂಪ್ಲಿಯ ಸರ್ಕಾರಿ ಪದವಿ ಪೂರ್ವ ಬಾಲಕರ ಕಾಲೇಜಿನ ಪ್ರಾಂಶುಪಾಲ ಸಿದ್ದಣ್ಣ ಪರಮೇಶ್ವರ್ ಪ್ರಜಾಪ್ರಭುತ್ವದ ಆಶಯಗಳ ಕುರಿತು ವಿಶೇಷ ಉಪನ್ಯಾಸ ನೀಡಿದರು. ಸಂವಿಧಾನದ ಪ್ರಸ್ತಾವನೆಯನ್ನು ಸಾಮೂಹಿಕವಾಗಿ ಬೋಧಿಸಲಾಯಿತು ಹಾಗೂ 'ಯುವ ಸಂಸತ್ತು' ಭಿತ್ತಿಪತ್ರಗಳನ್ನು ಅನಾವರಣಗೊಳಿಸಲಾಯಿತು. ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ. ಚಿದಾನಂದಪ್ಪ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ನವೀನ್ ಕುಮಾರ್, ಮಹಾನಗರ ಪಾಲಿಕೆ ಆಯುಕ್ತ ಪಿ.ಎಸ್. ಮಂಜುನಾಥ್, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಚಿದಾನಂದಪ್ಪ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಮುಖಂಡರು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ಮೊಬೈಲ್ ಹಾಗೂ ಸಾಮಾಜಿಕ ಜಾಲತಾಣಗಳನ್ನು ಜಾಗ್ರತೆಯಿಂದ ಬಳಸಿ: ಪಿಎಸ್ಐ ಸಲಹೆ



ಮರಿಯಮ್ಮನಹಳ್ಳಿ, ಸೆ.15: ತಾಂತ್ರಿಕವಾಗಿ ಅಭಿವೃದ್ಧಿ ಹೊಂದುತ್ತಿರುವ ಸಮಾಜದಲ್ಲಿ ಮೊಬೈಲ್ ಹಾಗೂ ಸಾಮಾಜಿಕ ಜಾಲತಾಣಗಳನ್ನು ಜಾಗ್ರತೆಯಿಂದ ಬಳಸಿ ಎಂದು ಮರಿಯಮ್ಮನಹಳ್ಳಿ ಆರಕ್ಷಕ ಠಾಣೆಯ ಮಹಿಳಾ ಉಪ ನಿರೀಕ್ಷಕಿ ತಾರಾಬಾಯಿ ಸಲಹೆ ನೀಡಿದರು. ಅವರು ಮರಿಯಮ್ಮನಹಳ್ಳಿಯ ಪ್ರಿಯದರ್ಶಿನಿ ಮಹಿಳಾ ಪದವಿ ಮಹಾವಿದ್ಯಾಲಯದಲ್ಲಿ ನಡೆದ ಸ್ವಾಗತ ಸಮಾರಂಭದ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದರು.

ಸಾಮಾಜಿಕ ಜಾಲತಾಣಗಳಲ್ಲಿ ಶಿಕ್ಷಣ-ಕ್ಕೆ ಸಂಬಂಧಿಸಿದಂತೆ ವಿಶೇಷ ಮಾಹಿತಿಗಳು ದೊರೆಯುತ್ತವೆ. ಅದರ ಸದುಪಯೋಗ ಪಡೆದುಕೊಳ್ಳಿ. ಅಲ್ಲದೇ ಫೇಸ್ಬುಕ್, ಇನ್ಸ್ಟಾಗ್ರಾಂ, ವಾಟ್ಸ್ ಅಪ್ಸ್, ಯೂಟ್ಯೂಬ್ ಹಾಗೂ ಇನ್ನಿತರೆ ಸಾಮಾಜಿಕ ಜಾಲತಾಣಗಳ ಮೂಲಕ ನಮ್ಮನ್ನು ದಾರಿ ತಪ್ಪಿಸಲೂ ಅನೇಕರು ಪ್ರಯತ್ನಿಸುತ್ತಾರೆ, ಅಂತಹವರಿಂದ ಎಚ್ಚರಿಕೆವಹಿಸಿ. ಕೇವಲ ಬಾಹ್ಯ ಆಕರ್ಷಣೆಗೆ ಒಳಗಾಗದೇ ಅವರ ವಾಸ್ತವಾಂಶದ ಕುರಿತು ಅರಿವಿರಲಿ ಎಂದರು.

ಇತ್ತೀಚೆಗೆ ಅಪ್ರಾಪ್ತ ಬಾಲಕಿಯರು ಪ್ರೀತಿ ಪ್ರೇಮದ ಬಾಹ್ಯ ಒತ್ತಡಕ್ಕೆ ಒಳಗಾಗಿ ಪೋಷಕರನ್ನೇ ತ್ಯಜಿಸಿ ತಮ್ಮ ಜೀವನವನ್ನು ಹಾಳು ಮಾಡಿಕೊಳ್ಳುತ್ತಿರುವ ಅನೇಕ ಉದಾಹರಣೆಗಳಿವೆ. ನೀವುಗಳು ಈ ಕುರಿತು ಜಾಗ್ರತೆವಹಿಸಿ, ನಿಮ್ಮನ್ನು ಸಾಕಿ ಸಲುಹಿದ ತಂದೆ ತಾಯಿಗಳ ಆಶಯದಂತೆ ಉತ್ತಮ ಶಿಕ್ಷಣ ಪಡೆದುಕೊಂಡು ಸಮಾಜದ ಪ್ರತಿಷ್ಠಿತ ವ್ಯಕ್ತಿಗಳಾಗಿ ಬಾಳಿ ಎಂದರು.

ಶಿಕ್ಷಣ ಹಾಗೂ ವಯಕ್ತಿಕ ಚಾರಿತ್ರ್ಯದ ಕುರಿತು ಮಾತನಾಡಿ ಉತ್ತಮ ಶಿಕ್ಷಣ ಪಡೆಯುವುದರ ಜೊತೆಗೆ ತಂದೆ ತಾಯಿಗಳು ನಿಮ್ಮ ಮೇಲೆ ಇಟ್ಟಿರುವ ಗೌರವವನ್ನು ಉಳಿಸಿ. ನಿಮ್ಮ ತಂದೆ ತಾಯಿಗಳು ನಿಮ್ಮ ಮೇಲೆ ಇಟ್ಟ ನಂಬಿಕೆಯನ್ನು ಉಳಿಸಿಕೊಳ್ಳಿ. ಮಹಿಳೆಯರಿಗೆ ಸಮಾಜದಲ್ಲಿ ವಿಫುಲ ಅವಕಾಶಗಳಿದ್ದು, ಅವುಗಳ ಸದುಪಯೋಗ ಪಡೆದು ಉತ್ತಮ ಸಮಾಜದ ನಿರ್ಮಾಣ ಮಾಡಿ ಎಂದರು.

ವೇದಿಕೆಯಲ್ಲಿ ಪ್ರಿಯದರ್ಶಿನಿ ಸ್ವ.ಪ.ಪೂ. ಕಾಲೇಜಿನ ಪ್ರಾಚಾರ್ಯ ಎಂ ಅಶೋಕ, ಪದವಿ ಕಾಲೇಜಿನ ಉಪನ್ಯಾಸಕರುಗಳಾದ ತಾರಾ, ಲೋಕಮಾತೆ ಉಪಸ್ಥಿತರಿದ್ದರು.

ಕಾರ್ಯಕ್ರಮದ ಅಧ್ಯಕ್ಷತೆವಹಿಸಿದ್ದ ಕಾಲೇಜಿನ ಪ್ರಾಚಾರ್ಯ ಪಕ್ಕೀರಪ್ಪರು ಕಾರ್ಯಕ್ರಮದ ಕುರಿತು ಮಾತನಾಡಿದರು. ಕಾರ್ಯಕ್ರಮವನ್ನು ವಿದ್ಯಾರ್ಥಿನಿಯರಾದ ಕರಿಬಸಮ್ಮ, ಕವಿತಾ ನಿರ್ವಹಿಸಿ, ಶಿವಮ್ಮ ಸ್ವಾಗತಿಸಿದರು. ಸೃಷ್ಟಿ ಪ್ರಾರ್ಥಿಸಿ ಗಂಗಮ್ಮ ವಂದಿಸಿದರು.

ಈ ಸಂದರ್ಭದಲ್ಲಿ ಕಾಲೇಜಿನ ಬೋಧಕ ಬೋಧಕೇತರ ಸಿಬ್ಬಂದಿ ಉಪಸ್ಥಿತರಿದ್ದರು. ವೇದಿಕೆ ಕಾರ್ಯಕ್ರಮದ ನಂತರ ವಿದ್ಯಾರ್ಥಿನಿಯರಿಂದ ಮನರಂಜನಾ ಕಾರ್ಯಕ್ರಮಗಳು ಜರುಗಿದವು.

# ಉಜ್ಜಿನಿ ಸದ್ಧರ್ಮ ಪೀಠಕ್ಕೆ ಸಚಿವ ವಿಜಯಾನಂದ ಕಾಶಪ್ಪನವರ್ ಭೇಟಿ

ಕೊಟ್ಟೂರು: ಸೆಪ್ಟೆಂಬರ್ 15- ಉಜ್ಜಿನಿ ಸದ್ಧರ್ಮ ಪೀಠದಲ್ಲಿ ನಡೆದ 1008 ಜಗದ್ಗುರು ಸಿದ್ದಲಿಂಗ ಶಿವಾಚಾರ್ಯರ ಪುರಾಣ ಮಹಾ ಮಂಗಲ ಹಾಗೂ ಗೋಶಾಲೆ ಉದ್ಘಾಟನೆ ಕಾರ್ಯಕ್ರಮಕ್ಕೆ ಸಣ್ಣ ಕೈಗಾರಿಕಾ ಹಾಗೂ ಸಾರ್ವಜನಿಕ ಉಧ್ಯಮಗಳು ಹಾಗೂ ಬಾಗಲಕೋಟೆ ಉಸ್ತುವಾರಿ ಸಚಿವರಾದ ವಿಜಯಾನಂದ ಕಾಶಪ್ಪನವರ್ ಭೇಟಿ ನೀಡಿ ಧಾರ್ಮಿಕ ಹಾಗೂ ಸಾಮಾಜಿಕ ಚಟುವಟಿಕೆಗಳ ಕುರಿತು ಮೆಚ್ಚುಗೆ ವ್ಯಕ್ತಪಡಿಸಿದರು,ಹಾಗೂ ಪೀಠದ ಧಾರ್ಮಿಕ ಹಾಗೂ ಸಾಮಾಜಿಕ ಚಟುವಟಿಕೆಗಳನ್ನು ವೀಕ್ಷಿಸಿದರು. ಇದೇ ಸಂದರ್ಭದಲ್ಲಿ ನೂತನವಾಗಿ ನಿರ್ಮಿಸಿರುವ ಗೋಶಾಲೆಯನ್ನು ಉದ್ಘಾಟಿಸಿ, ಗೋ ಸಂರಕ್ಷಣೆಯ ಮಹತ್ವವನ್ನು ತಿಳಿಸಿದರು.ಪೀಠಕ್ಕೆ ಆಗಮಿಸಿದ ಸಚಿವರನ್ನು ಪೀಠದ ವತಿಯಿಂದ ಆತ್ಮೀಯವಾಗಿ ಸ್ವಾಗತಿಸಲಾಯಿತು. ಬಳಿಕ ಪೀಠದ ಆವರಣದಲ್ಲಿರುವ ವಿವಿಧ ಧಾರ್ಮಿಕ ಕೇಂದ್ರಗಳು ಹಾಗೂ ಅಭಿವೃದ್ಧಿ ಕಾಮಗಾರಿಗಳನ್ನು ವೀಕ್ಷಿಸಿದ ಸಚಿವರು, ಭಕ್ತರಿಗೆ ಮತ್ತು ಸಾರ್ವಜನಿಕರಿಗೆ ಪೀಠದ ವತಿಯಿಂದ ನಡೆಯುತ್ತಿರುವ ಸೇವಾ ಕಾರ್ಯಗಳ ಬಗ್ಗೆ ಮಾಹಿತಿ ಪಡೆದು ಮಾತನಾಡಿ ಗೋವುಗಳ ಸಂರಕ್ಷಣೆ ಹಾಗೂ ಪಾಲನೆ ಭಾರತೀಯ ಸಂಸ್ಕೃತಿಯಲ್ಲಿ ವಿಶೇಷ ಸ್ಥಾನ ಹೊಂದಿದ್ದು, ಇಂತಹ ಗೋಶಾಲೆಗಳು ಗ್ರಾಮೀಣ ಪ್ರದೇಶಗಳಲ್ಲಿ ಮಹತ್ವದ ಪಾತ್ರ ವಹಿಸುತ್ತವೆ ಎಂದು ಹೇಳಿದರು ಪೀಠವು ಕೇವಲ ಪೂಜಾ



ಕೇಂದ್ರಗಳಾಗಿರದೆ ಸಮಾಜಮುಖಿ ಚಟುವಟಿಕೆಗಳ ಕೇಂದ್ರಗಳಾಗಿದ್ದು ಶಿಕ್ಷಣ, ಆರೋಗ್ಯ,ಗೋಸಂರಕ್ಷಣೆ ಹಾಗೂ ಜನಸೇವೆಯಂತಹ ಕಾರ್ಯಗಳಿಗೆ ಆದ್ಯತೆ ನೀಡುತ್ತಿರುವುದು ಶ್ಲಾಘನೀಯ ಎಂದರು.ಪೀಠದ ವತಿಯಿಂದ ನಡೆಯುತ್ತಿರುವ ವಿವಿಧ ಜನಪರ ಹಾಗೂ ಧಾರ್ಮಿಕ ಕಾರ್ಯಕ್ರಮಗಳ ಕುರಿತು ಸಚಿವರು ಮೆಚ್ಚುಗೆ ವ್ಯಕ್ತಪಡಿಸಿದರು. ಮುಂದಿನ ದಿನಗಳಲ್ಲಿ ಪೀಠದ ಅಭಿವೃದ್ಧಿಗೆ ಅಗತ್ಯ ಸಹಕಾರ ನೀಡುವುದಾಗಿ ತಿಳಿಸಿದರು.

ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿದ್ದ ಸದ್ಧರ್ಮ ಸಿಂಹಾಸನ ಪೀಠದ 1008 ಸಿದ್ದಲಿಂಗ ರಾಜದೇಶಿ ಕೇಂದ್ರ ಶಿವಾಚಾರ್ಯ ಮಹಾಸ್ವಾಮೀಜಿಯವರು ಆಶೀರ್ವಚನ ನೀಡಿದರು ಕಾರ್ಯಕ್ರಮದಲ್ಲಿ ಶ್ರೀ ರೇಣುಕಾ ಶಿವಾಚಾರ್ಯರು ಎಡೆಯೂರು, ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರು ಮರಿಯಮ್ಮನಹಳ್ಳಿ, ಶ್ರೀ ವರಸದ್ಯೋಜಾತ ಶಿವಾಚಾರ್ಯರು ಹರಪನಹಳ್ಳಿ ತೆಗ್ಗಿನಮಠ, ಶ್ರೀ ಪ್ರಶಾಂತ ಸಾಗರ ಶಿವಾಚಾರ್ಯರು ಕೂಡ್ಲಿಗಿ, ಹಿರೇಮಠ ಶ್ರೀ ಸಿದ್ದಲಿಂಗ ಶಿವಾಚಾರ್ಯರು ತಾವರೆಕೆರೆ, ಶ್ರೀ ಮಹೇಶ್ವರ ಸ್ವಾಮಿಗಳು ನಂದಿಪುರ, ಶ್ರೀ ಹಾಲಶಂಕರ ಸ್ವಾಮಿಗಳು ಹಗರಿಬೊಮ್ಮನಹಳ್ಳಿ ,ಶಾಸಕರಾದ ಎನ್ ಟಿ ಶ್ರೀನಿವಾಸ್,ಶ್ರೀಮತಿ ವೀಣಾ ಕಾಶಪ್ಪನವರ್, ಬಿಡಿಸಿಸಿ ಬ್ಯಾಂಕ್ ಅಧ್ಯಕ್ಷರಾದ ಗುಂಡುಮುಣುಗು ತಿಪ್ಪೇಸ್ವಾಮಿ, ಉಪಾಧ್ಯಕ್ಷರಾದ ದಾರುಕೇಶ್,ಅಡಿಕೆ ಮಂಜುನಾಥ, ವಕೀಲರಾದ ಮರುಳಸಿದ್ದಪ್ಪ ಮುಖಂಡರಾದ ಮಠದ ಮಲ್ಲಿಕಾರ್ಜುನ ಸೇರಿದಂತೆ ಭಕ್ತರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ಶ್ರದ್ಧಾ ಭಕ್ತಿಯಿಂದ ವೀರಭದ್ರೇಶ್ವರ ಜಯಂತಿ



ಬಳ್ಳಾರಿ, ಸೆ.15: ನಗರದ ವೀಭದ್ರೇಶ್ವರ ಸ್ವಾಮಿ ಜಯಂತೋತ್ಸವ ಸಮಿತಿಯಿಂದ ಇಂದು 7ನೇ ವರ್ಷದ ಶ್ರೀ ವೀರಭದ್ರೇಶ್ವರ ಸ್ವಾಮಿ ಜಯಂತೋತ್ಸವವನ್ನು ಇಂದು ಇಲ್ಲಿನ ಪಾರ್ವತಿ ನಗರದ ಅನಾದಿ ಲಿಂಗೇಶ್ವರ ದೇವಸ್ಥಾನದ ಆವರಣದಲ್ಲಿ ಹಮ್ಮಿಕೊಂಡಿತ್ತು.

ಇದರಂಗವಾಗಿ ಬೆಳಿಗ್ಗೆ ನಗರದ ಕನಕ ದುರ್ಗಮ್ಮದೇವಸ್ಥಾನದಿಂದ-ಅನಾದಿಲಿಂಗೇಶ್ವರ ದೇವಸ್ಥಾನದಲ್ಲಿನ ವೀರಭದ್ರೇಶ್ವರ ಸನ್ನಿಧಾನಕ್ಕೆ ವೀರಭದ್ರೇಶ್ವರ ಭಾವಚಿತ್ರದ ಮೆರವಣಿಗೆ ಗಂಗೆ ಕೊಡದೊಂದಿಗೆ ಕುಂಬ ಕಳಸ, ವೀರಗಾಸೆ, ನಂದಿಕೋಲು,ಸಮಾಳ ವಾದನದ ಮೂಲಕ ಮೆರವಣಿಗೆಯಲ್ಲಿ ತೆರಳಲಾಯ್ತು.

ಹರಗಿನದೋಣಿ ಮಠದ, ಕಲ್ಯಾಣ ಮಠದ ಶ್ರೀಗಳ ಸಾನಿಧ್ಯದಲ್ಲಿ 501 ಮುತ್ತೈದೆಯರಿಗೆ ಹಸಿರುಸೀರೇ ಹಾಗೂ ಉಡಿ ತುಂಬುವ ಕಾರ್ಯಕ್ರಮ ಜರುಗಿತು, ನಂತರ ಪರಮಪೂಜ್ಯರಿಂದ ಆಶೀರ್ವಚನ, ಮಹಾಮಂಗಳಾರತಿ ಪ್ರಸಾದ ವಿತರಣೆ ನಡೆಯಿತು.

ಜನ ಕಲ್ಯಾಣ ರಕ್ಷಣಾ ವೇದಿಕೆ, ಬಳ್ಳಾರಿ ಜಿಲ್ಲಾ ವೀರಶೈವ ಜಂಗಮ ಅರ್ಚಕ ಮತ್ತು ಪುರೋಹಿತರ ಸಂಘ, ಮರಿಸ್ಮವಾಮಿಗಳ ಮಠದ ಭಕ್ತರು ಪಾಲ್ಗೊಂಡಿದ್ದರು.

# ಪ್ರಜಾಪ್ರಭುತ್ವ ಬಲಪಡಿಸಲು ಮತದಾನ ಅಗತ್ಯ: ಶಾಸಕಿ ಅನ್ನಪೂರ್ಣ ತುಕಾರಾಂ



ಸಂಡೂರು/ಬಳ್ಳಾರಿ: ಪ್ರಜಾಪ್ರಭುತ್ವದ ಮೌಲ್ಯಗಳು ಹಾಗೂ ಪ್ರಜೆಗಳ ಹಕ್ಕುಗಳ ಕುರಿತು ಜಾಗೃತಿ ಮೂಡಿಸುವುದು ಪ್ರತಿಯೊಬ್ಬರ ಕರ್ತವ್ಯವಾಗಿದ್ದು, ಜವಾಬ್ದಾರಿಯುತ ಮತದಾನವೇ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಬಲಪಡಿಸುವ ಪ್ರಮುಖ ಸಾಧನವಾಗಿದೆ ಎಂದು ಸಂಡೂರು ಶಾಸಕಿ ಅನ್ನಪೂರ್ಣ ಈ. ತುಕಾರಾಂ ಹೇಳಿದರು.

ಪಟ್ಟಣದ ಗುರುಭವನದಲ್ಲಿ ಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, "ಜನರಿಂದ, ಜನರಿಗೋಸ್ಕರ, ಜನರಿಗಾಗಿ ಇರುವ ಸರ್ಕಾರವೇ ಪ್ರಜಾಪ್ರಭುತ್ವ" ಎಂಬ ಅಬ್ರಹಾಂ ಲಿಂಕನ್ ಅವರ ಮಾತು ಪ್ರಜಾಪ್ರಭುತ್ವದ ಮೂಲ ಆಶಯವನ್ನು ಪ್ರತಿಬಿಂಬಿಸುತ್ತದೆ ಎಂದು ಹೇಳಿದರು. ಪ್ರಜೆಗಳು ತಮ್ಮ ಪ್ರತಿನಿಧಿಗಳನ್ನು ಆಯ್ಕೆ ಮಾಡುವ ಮೂಲಕ ಆಡಳಿತದಲ್ಲಿ ಭಾಗಿಯಾಗುವುದು ಪ್ರತಿನಿಧಿ ಪ್ರಜಾಪ್ರಭುತ್ವದ ಪ್ರಮುಖ ಅಂಶವಾಗಿದೆ. ಆದ್ದರಿಂದ ಪ್ರತಿಯೊಬ್ಬ ಅರ್ಹ ನಾಗರಿಕರೂ ತಮ್ಮ ಮತದಾನದ ಹಕ್ಕನ್ನು ಜವಾಬ್ದಾರಿಯಿಂದ ಚಲಾಯಿಸಬೇಕು ಎಂದು ಕರೆ ನೀಡಿದರು.

ಭಾರತೀಯ ಸಂವಿಧಾನದ 61ನೇ ತಿದ್ದುಪಡಿಯ ಮೂಲಕ ಮತದಾನದ ವಯೋಮಿತಿಯನ್ನು 21ರಿಂದ 18 ವರ್ಷಕ್ಕೆ ಇಳಿಸಿರುವುದು ಯುವಜನತೆಗೆ ಪ್ರಜಾಸತ್ತಾತ್ಮಕ ಪ್ರಕ್ರಿಯೆಯಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುವ ಅವಕಾಶ ಕಲ್ಪಿಸಿದೆ. ಯಾವುದೇ ಆಸೆ-ಆಮಿಷಗಳಿಗೆ ಒಳಗಾಗದೆ ಸೂಕ್ತ ಅಭ್ಯರ್ಥಿಯನ್ನು ಆಯ್ಕೆ ಮಾಡುವ ಮೂಲಕ ಮತದಾನದ ಹಕ್ಕನ್ನು ಬಳಸಬೇಕು ಎಂದು ತಿಳಿಸಿದರು. ಜವಾಬ್ದಾರಿಯುತ ಮತದಾನವು ಉತ್ತಮ ಆಡಳಿತಕ್ಕೆ ದಾರಿ ಮಾಡಿಕೊಡಲಿದ್ದು, ಭ್ರಷ್ಟಾಚಾರ ರಹಿತ, ಸುಭದ್ರ ಹಾಗೂ ಜನಪರ ಆಡಳಿತ ನಿರ್ಮಾಣಕ್ಕೆ ಪ್ರತಿಯೊಬ್ಬ ನಾಗರಿಕರ ಪಾಲ್ಗೊಳ್ಳುವಿಕೆ ಅಗತ್ಯವಾಗಿದೆ ಎಂಬ ಸಂದೇಶವನ್ನು ಕಾರ್ಯಕ್ರಮದಲ್ಲಿ ಸಾರಲಾಯಿತು.

ಕಾರ್ಯಕ್ರಮದಲ್ಲಿ ತಾಲೂಕು ಪಂಚಾಯತ್ ಇಒ ಮಡಗಿನ ಬಸಪ್ಪ, ತಹಶೀಲ್ದಾರ್ ಅನಿಲ್ ಕುಮಾರ್, ಕ್ಷೇತ್ರ ಶಿಕ್ಷಣಾಧಿಕಾರಿ ಡಾ.ಐ.ಆರ್.ಅಕ್ಕಿ, ಸಮಾಜ ಕಲ್ಯಾಣ ಇಲಾಖೆಯ ವೆಂಕಟೇಶ್, ಸಿಡಿಪಿಒ ನಾಗರಾಜ್, ಪುರಸಭೆ ಮುಖ್ಯಾಧಿಕಾರಿ ವಿನಯ್ ಕುಮಾರ್ ಗೌಡ ಸೇರಿದಂತೆ ವಿವಿಧ ಇಲಾಖೆಗಳ ತಾಲೂಕು ಮಟ್ಟದ ಅಧಿಕಾರಿಗಳು ಹಾಗೂ ಬಿಕೆಜಿ ಶಾಲೆಯ ಮಕ್ಕಳು ಉಪಸ್ಥಿತರಿದ್ದರು.

# ಕಿಸಾನ್ ಸೇನಾ ಯುವ ಘಟಕದ ಕಲ್ಯಾಣ ಕರ್ನಾಟಕದ ಅಧ್ಯಕ್ಷರಾಗಿ ಶಬ್ಬೀರ್ ಎಚ್. ನೇಮಕ



ಬಳ್ಳಾರಿ : ಭಾರತೀಯ ಕ್ರಾಂತಿಕಾರಿ ಕಿಸಾನ್ ಸೇನಾ (ರಿ), ದಿಲ್ಲಿ ಇದರ ಕಲ್ಯಾಣ ಕರ್ನಾಟಕ ಯುವ ಘಟಕದ ಅಧ್ಯಕ್ಷರಾಗಿ ಎಚ್. ಶಬ್ಬೀರ್ ಅವರನ್ನು ನೇಮಕ ಮಾಡಲಾಗಿದೆ.

ಸಂಘಟನೆಯ ರಾಷ್ಟ್ರೀಯ ಅಧ್ಯಕ್ಷ ಎಂ. ಎನ್. ಕುಕನೂರ್ ಆದೇಶದ ಮೇರೆಗೆ ಈ ನೇಮಕಾತಿ ನಡೆದಿದೆ.

ಕಲ್ಯಾಣ ಕರ್ನಾಟಕ ಭಾಗದಲ್ಲಿ ಯುವಕರನ್ನು ಸಂಘಟಿಸುವುದು, ರೈತರು ಹಾಗೂ ಯುವಜನರ ಸಮಸ್ಯೆಗಳಿಗೆ ಧ್ವನಿಯಾಗುವುದು, ಸಾಮಾಜಿಕ ನ್ಯಾಯ ಮತ್ತು ಜನಪರ ಹೋರಾಟಗಳಿಗೆ ಯುವಶಕ್ತಿಯನ್ನು ಒಗ್ಗೂಡಿಸುವುದು ಹಾಗೂ ಸಂಘಟನೆಯ ಚಟುವಟಿಕೆಗಳನ್ನು ಬಲಪಡಿಸುವ ಜವಾಬ್ದಾರಿಯನ್ನು ನೂತನ ಅಧ್ಯಕ್ಷರಿಗೆ ವಹಿಸಲಾಗಿದೆ ಎಂದು ಪ್ರಕಟನೆ ತಿಳಿಸಿದೆ.

# ಕೊಪ್ಪಳ ಜಿಲ್ಲೆಯಾದ್ಯಂತ 8,282 ಸಿಸಿಟಿವಿ ಕ್ಯಾಮೆರಾಗಳ ಕಣ್ಗಾವಲು

ಕೊಪ್ಪಳ: ಗೌರಿ ಗಣೇಶ ಹಬ್ಬದ ಸಂದರ್ಭದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡಲು ಜಿಲ್ಲೆಯಾದ್ಯಂತ 8,282 ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಾಹಿಲ್ ಬಾಗ್ಲಾ ಹೇಳಿದರು.ತಮ್ಮ ಕಚೇರಿಯಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು '735 ಸೂಕ್ಷ್ಮ ಪ್ರದೇಶಗಳ ಮೇಲೆ ಕಮಾಂಡ್ ಸೆಂಟರ್ ಮೂಲಕ ನಿರಂತರ ನಿಗಾ ವಹಿಸಲಾಗುತ್ತಿದೆ. ಹೆಚ್ಚುವರಿ ಗಸ್ತಿಗಾಗಿ 20 ವಾಹನಗಳನ್ನು ನಿಯೋಜಿಸಲಾಗಿದ್ದು, ಪ್ರಮುಖ ಗಣೇಶ ಮೂರ್ತಿಗಳ ವಿಸರ್ಜನಾ ದಿನಗಳಲ್ಲಿ 3 ಡ್ರೋನ್ ಕ್ಯಾಮೆರಾಗಳ ಮೂಲಕ ಮೇಲ್ವಿಚಾರಣೆ ನಡೆಸಲಾಗುವುದು. ಜಿಲ್ಲೆಯಾದ್ಯಂತ ಅಧಿಕಾರಿಗಳ ನೇತೃತ್ವದಲ್ಲಿ ಹಾಗೂ ಬೀಟ್ ಮಟ್ಟದಲ್ಲಿ 138 ಶಾಂತಿ ಸಭೆಗಳನ್ನು ನಡೆಸಲಾಗಿದೆ' ಎಂದು ತಿಳಿಸಿದರು.ನಾಲ್ಕು ಜನ ಡಿವೈಎಸ್‌ಪಿ, 14 ಪೊಲೀಸ್ ಇನ್‌ಸ್ಪೆಕ್ಟರ್‌ಗಳು, 27 ಜನ ಪಿಎಸ್ಐ, 59 ಎಎಸ್ಐ, 395 ಹೆಡ್ ಕಾನ್‌ಸ್ಟೆಬಲ್, ಮೂರು ಕೆಎಸ್‌ಆರ್‌ಪಿ ತುಕಡಿ, 10 ಡಿಎಆರ್ ಹಾಗೂ 500 ಜನ ಗೃಹರಕ್ಷಕ ಸಿಬ್ಬಂದಿಯನ್ನು ಭದ್ರತಾ ಕರ್ತವ್ಯಕ್ಕೆ ನಿಯೋಜಿಸಲಾಗಿದೆ. ಮುಂಜಾಗ್ರತಾ ಕ್ರಮವಾಗಿ 15 ರೌಡಿಶೀಟರ್‌ಗಳನ್ನು ಜಿಲ್ಲೆಯಿಂದ ಗಡಿಪಾರು ಮಾಡಲಾಗಿದೆ. ಶಾಂತಿ ಮತ್ತು ಸುವ್ಯವಸ್ಥೆಗೆ ಭಂಗ ತರುವ ಸಾಧ್ಯತೆಯಿರುವ 1177 ವ್ಯಕ್ತಿಗಳಿಂದ ತಹಶೀಲ್ದಾರ್‌ಗಳ ಸಮ್ಮುಕ್ಷಮದಲ್ಲಿ ಮುಚ್ಚಳಿಕೆ ಬರೆಸಿಕೊಳ್ಳಲಾಗಿದೆ. ಕೊಪ್ಪಳ ನಗರ, ಗಂಗಾವತಿ ನಗರ ಹಾಗೂ ಕನಕಗಿರಿ ಪಟ್ಟಣದ ಸೂಕ್ಷ್ಮ ಪ್ರದೇಶಗಳಲ್ಲಿ ಸಾರ್ವಜನಿಕರಲ್ಲಿ ಭಯಮುಕ್ತ ವಾತಾವರಣ ಮೂಡಿಸಲು ಪೊಲೀಸ್ ಪಥಸಂಚಲನ ನಡೆಸಲಾಗಿದೆ ಎಂದು ವಿವರಿಸಿದರು.ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಹೇಮಂತ್ ಕುಮಾರ್, ಕೊಪ್ಪಳ ನಗರ ಪೊಲೀಸ್ ಠಾಣೆಯ ಪೊಲೀಸ್ ಇನ್‌ಸ್ಪೆಕ್ಟರ್ ಸುರೇಶ ಡಿ., ಪಿಎಸ್ಐ ರೇವಣ್ಣ ಗುರಿಕಾರ ಇದ್ದರು.

# ಹುಲಿ ದಾಳಿಗೆ ರೈತ ಬಲಿ



ಚಾಮರಾಜನಗರ: ತಾಲ್ಲೂಕಿನ ಬಡಗಲಪುರ ಗ್ರಾಮದಲ್ಲಿ ಹುಲಿ ದಾಳಿಗೆ ಬಸವಣ್ಣ (65) ಎಂಬುವರು ಮೃತಪಟ್ಟಿದ್ದಾರೆ.

ಸಂಜೆ ಜಮೀನಿನಲ್ಲಿ ಕೆಲಸ ಮಾಡುವಾಗ ಹುಲಿ ದಾಳಿ ನಡೆಸಿದ್ದು ಕೊಂದು ಹಾಕಿದೆ. ಅರ್ಧ ದೇಹವನ್ನು ತಿಂದಿದ್ದು, ಉಳಿದರ್ಧ ದೇಹವನ್ನು ಸಮೀಪದ ಕಬ್ಬಿನ ತೋಟಕ್ಕೆ ಎಳೆದೊಯ್ದಿದೆ.ರಾತ್ರಿಯಾದರೂ ಬಸವಣ್ಣ ಮನೆಗೆ ಬಾರದ ಹಿನ್ನೆಲೆಯಲ್ಲಿ ಕುಟುಂಬಸ್ಥರು ಜಮೀನಿಗೆ ತೆರಳಿ ನೋಡಿದಾಗ ಹುಲಿ ದಾಳಿ ನಡೆಸಿರುವುದು ಬೆಳಕಿಗೆ ಬಂದಿದೆ.ರೈತರ ಆಕ್ರೋಶ;ಹುಲಿ ದಾಳಿ ಸುದ್ದಿ ತಿಳಿಯುತ್ತಿದ್ದಂತೆ ಸುತ್ತಮುತ್ತಲಿನ ಗ್ರಾಮಗಳ ನೂರಾರು ರೈತರು ಜಮಾಯಿಸಿ ಅರಣ್ಯ ಇಲಾಖೆ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಮೃತರ ಕುಟುಂಬಕ್ಕೆ ಸೂಕ್ತ ಪರಿಹಾರ ಹಾಗೂ ಸರ್ಕಾರಿ ಉದ್ಯೋಗ ನೀಡುವ ಭರವಸೆ ನೀಡುವವರೆಗೆ ಶವ ಎತ್ತಲು ಅವಕಾಶ ನೀಡುವುದಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

# ಹಣ್ಣುಗಳಲ್ಲಿ ಹುಳು ಪತ್ತೆ: ಶಿವಮೊಗ್ಗದ ಎರಡು ಜ್ಯೂಸ್ ಸೆಂಟರ್ ಬಂದ್, ಹೋಟೆಲ್‌ಗಳಿಗೆ ನೋಟಿಸ್




ಶಿವಮೊಗ್ಗ: ಹೋಟೆಲ್ ಹಾಗೂ ಜ್ಯೂಸ್ ಸೆಂಟರ್‌ಗಳ ಮೇಲೆ ಮಂಗಳವಾರ ಶಿವಮೊಗ್ಗ ಉಪ ವಿಭಾಗಾಧಿಕಾರಿ ಡಾ.ಮೈತ್ರಿ ಅವರು ದಿಢೀರ್ ದಾಳಿ ನಡೆಸಿದರು. ಹಣ್ಣಿನಲ್ಲಿ ಹುಳ ಪತ್ತೆಯಾದ ಕಾರಣಕ್ಕೆ ತನು ಜ್ಯೂಸ್ ಸೆಂಟರ್‌ನ ಎರಡು ಸೆಂಟರ್‌ಗಳನ್ನು ಬಂದ್ ಮಾಡಿಸಲಾಗಿದೆ ಹಾಗೂ ಮಾಂಸಾಹಾರಿ ಹೋಟೆಲ್‌ನಲ್ಲಿ ಕಬಾಬ್‌ಗೆ ಬಣ್ಣ ಮಿಕ್ಸ್ ಮಾಡುತ್ತಿದ್ದ ಕಾರಣಕ್ಕೆ ನೋಟಿಸ್ ನೀಡಲಾಗಿದೆ.

ಶಿವಮೊಗ್ಗ ಜಿಲ್ಲಾ ಆಹಾರ ಸುರಕ್ಷತಾ ಅಧಿಕಾರಿಯಾಗಿರುವ ಎಸಿ ಡಾ. ಮೈತ್ರಿ ಇಂದು ತಿಲಕ್ ನಗರದ ವಿವಿಧ ಜ್ಯೂಸ್ ಸೆಂಟರ್, ನಾನ್‌ವೆಜ್ ಹೋಟೆಲ್‌ಗಳಿಗೆ ದಿಢೀರ್ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಈ ವೇಳೆ ಜ್ಯೂಸ್ ಸೆಂಟರ್ ಹಾಗೂ ಹೋಟೆಲ್ ಮಾಲೀಕರಿಗೆ ಉತ್ತಮ ಗುಣಮಟ್ಟ ಕಾಪಾಡಿಕೊಳ್ಳುವಂತೆ ಹಾಗೂ ವಸ್ತುಗಳ ಮೇಲೆ ಉತ್ಪಾದನೆಯಾಗಿರುವ ದಿನಾಂಕ ಹಾಗೂ ಅವಧಿ ಮುಗಿಯುವ ದಿನಾಂಕ ಸರಿಯಾಗಿ ನಮೂದಾಗಿರಬೇಕು ಎಂದು ತಾಕೀತು ಮಾಡಿದರು.

ಹೋಟೆಲ್ ಹಾಗೂ ಜ್ಯೂಸ್ ಸೆಂಟರ್‌ಗಳ ಮೇಲೆ ಉಪ ವಿಭಾಗಾಧಿಕಾರಿ ದಿಢೀರ್ ದಾಳಿ ನಂತರ ತಿಲಕ್ ನಗರಲ್ಲಿ ಹಲವು ವರ್ಷಗಳಿಂದ ಕಾರ್ಯ ನಿರ್ವಹಿಸುತ್ತಿದ್ದ ತನು ಜ್ಯೂಸ್ ಸೆಂಟರ್‌ಗೆ ಭೇಟಿ ನೀಡಿ ಪರಿಶೀಲಿಸಿದರು. ಈ ವೇಳೆ ಹಣ್ಣಿನಲ್ಲಿ ಹುಳ ಕಂಡುಬಂದಿತು. ನಂತರ ತಿಲಕ್ ನಗರದಲ್ಲಿಯೇ ರಾಘವೇಂದ್ರ ಸ್ವಾಮಿ ಮಠದ ಮುಂದೆ ಇರುವ ಇನ್ನೊಂದು ತನು ಜ್ಯೂಸ್ ಸೆಂಟರ್‌ಗೂ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಈ ವೇಳೆ ಇಲ್ಲೂ ಸಹ ಹಣ್ಣಿನಲ್ಲಿ ಹುಳ ಕಂಡುಬಂದಿತು. ಇದರಿಂದ ತಕ್ಷಣ ತಮ್ಮೊಂದಿಗೆ ಬಂದಿದ್ದ ತಹಶೀಲ್ದಾರ್ ರಾಜೀವ್ ಹಾಗೂ ಆರೋಗ್ಯ ಇಲಾಖೆಯ ಅಧಿಕಾರಿಗಳಿಗೆ ಎರಡು ಜ್ಯೂಸ್ ಸೆಂಟರ್ ಅನ್ನು ಬಂದ್ ಮಾಡಿಸಿ, ನೋಟಿಸ್ ನೀಡುವಂತೆ ಸೂಚಿಸಿದರು.

ಬಳಿಕ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಸಾರ್ವಜನಿಕರಿಂದ ದೂರು ಬಂದ ಕಾರಣಕ್ಕೆ ಭೇಟಿ ನೀಡಲಾಯಿತು. ಬಂದು ನೋಡಿದ್ರೆ, ನಮಗೆ ಆಘಾತವಾಯಿತು. ಇಲ್ಲಿಗೆ ಮಕ್ಕಳು, ಸಾರ್ವಜನಿಕರು ಜ್ಯೂಸ್ ಕುಡಿಯಲು ಬರುತ್ತಾರೆ. ಇಲ್ಲಿಗೆ ಬಂದವರು ಜ್ಯೂಸ್ ಚೆನ್ನಾಗಿದೆ ಎಂದು ಕುಡಿದು ದೇಹ ತಂಪಾಗಿಸಿಕೊಂಡು ಹೋಗುತ್ತಾರೆ. ಈಗ ಬಿಸಿಲು ಹೆಚ್ಚಾಗಿದೆ. ಆದರೆ ಜ್ಯೂಸ್ ಸೆಂಟರ್ ನಲ್ಲಿ ವಾತಾವರಣ ಬೇರೆ ರೀತಿಯಲ್ಲಿ ಇದೆ. ಗ್ರೇಪ್ಸ್, ಚಿಕ್ಕು, ಡ್ರ್ಯಾಗನ್ ಫ್ರೂಟ್ಸ್, ದಾಳಿಂಬೆ ಸೇರಿದಂತೆ ಎಲ್ಲಾ ಹಣ್ಣುಗಳು ಕೊಳೆತ ಸ್ಥಿತಿಯಲ್ಲಿ ದೂರೆಕಿವೆ. ಅಲ್ಲಿ ಫಂಗಸ್ ಬೆಳೆದಿದೆ. ಅವುಗಳು ಬಳಕೆಗೆ ಯೋಗ್ಯವಿಲ್ಲ. ಇಂತಹ ಹಣ್ಣುಗಳನ್ನು ಇಟ್ಟುಕೊಂಡು ಸಾರ್ವಜನಿಕರಿಗೆ ಜ್ಯೂಸ್ ಕೊಡುತ್ತಿದ್ದಾರೆ. ಇದು ಆಘಾತಕಾರಿ ವಿಷಯ. ಈಗಲೇ ಜ್ಯೂಸ್ ಸೆಂಟರ್ ಅನ್ನು ಬಂದ್ ಮಾಡಿ, ನೋಟಿಸ್ ಜಾರಿ ಮಾಡುತ್ತಿದ್ದೇವೆ ಎಂದು ಹೇಳಿದರು.

ಹಣ್ಣುಗಳು ಬಹಳ ದಿನಗಳಿಂದ ಸಂಗ್ರಹವಾಗಿವೆ. ಇನ್ನು ಹೋಟೆಲ್ ಗಳಿಗೆ ಹೋದಾಗ ಲೈಸನ್ಸ್ ಕಾಣುವ ಹಾಗೆ ಹಾಕಿಲ್ಲ. ಎಲ್ಲೂ ಸ್ವಚ್ಛತೆ ಕಾಪಾಡಿಕೊಂಡಿಲ್ಲ. ಹೋಟೆಲ್‌ಗಳಲ್ಲಿ ಎಲ್ಲೂ ಸಹ ಆಹಾರ ಸುರಕ್ಷತೆಯ ನಿಯಮಗಳನ್ನು ಪಾಲಿಸಿಲ್ಲ. ಲೋಪದೋಷಗಳು ಕಂಡುಬಂದ ಕಡೆ ನೋಟಿಸ್ ಜಾರಿ ಮಾಡುತ್ತೇವೆ. ಅವರು ಅದಕ್ಕೆ 15 ದಿನದ ಒಳಗೆ ಉತ್ತರ ಕೊಡದೇ ಹೋದ್ರೆ, ಅವರ ಅಂಗಡಿಯ ಲೈಸನ್ಸ್ ರದ್ದು ಮಾಡಲಾಗುತ್ತದೆ ಎಂದು ಅವರು ಎಚ್ಚರಿಕೆ ನೀಡಿದರು.

# ಜವಾಬ್ದಾರಿಯುತ ನಾಗರೀಕರಾಗಲು ಸಂವಿಧಾನದ ಮೌಲ್ಯಗಳನ್ನು ಅರ್ಥಮಾಡಿಕೊಳ್ಳಬೇಕು ; ಶಾಸಕ ಬಿ.ಪಿ ಹರೀಶ್




ಹರಿಹರ : ಭಾರತ ದೇಶದ ಜವಾಬ್ದಾರಿಯುತ ನಾಗರಿಕರಾಗಲು ಸಂವಿಧಾನದ ಮೌಲ್ಯಗಳನ್ನು ಖಂಡಿತವಾಗಿಯೂ ಎಲ್ಲರೂ ಅರ್ಥಮಾಡಿಕೊಳ್ಳಬೇಕು ಆಗ ಮಾತ್ರ ಉತ್ತಮ ನಾಗರಿಕರಾಗಲು ಸಾಧ್ಯ ಎಂದು ಶಾಸಕ ಬಿ.ಪಿ ಹರೀಶ್ ಅಭಿಮತ ವ್ಯಕ್ತಪಡಿಸಿದರು.

ನಗರದ ತಾಲೂಕ ಪಂಚಾಯಿತಿ ಸಭಾಂಗಣದಲ್ಲಿ ಮಂಗಳ ವಾರ ತಾಲ್ಲೂಕು ಆಡಳಿತ, ತಾಲ್ಲೂಕು ಪಂಚಾಯಿತಿ, ನ್ಯಾಯಾಂಗ ಇಲಾಖೆ ಹಾಗೂ ಹರಿಹರ ನಗರಸಭೆ ವತಿಯಿಂದ ಆಯೋಜಿಸಿದ್ದ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಹಾಗೂ ಯುವ ಸಂಸತ್ತು ಸಭೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಪ್ರಜಾಪ್ರಭುತ್ವ ವ್ಯವಸ್ಥೆಯ ಮಹತ್ವ, ಸಂವಿಧಾನದ ಆಶಯಗಳು ಹಾಗೂ ನಾಗರಿಕರ ಹಕ್ಕು ಮತ್ತು ಕರ್ತವ್ಯಗಳ ಕುರಿತು ವಿದ್ಯಾರ್ಥಿಗಳಿಗೆ ಜಾಗೃತಿಯ ಅವಶ್ಯಕತೆ ಇದೆ.

ಭಾರತೀಯ ಸಂವಿಧಾನ ರಚನೆಯಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ರವರು ವಹಿಸಿದ ಮಹತ್ವದ ಪಾತ್ರ ಸ್ಮರಿಸಿದ ಶಾಸಕರು, ಸಂವಿಧಾನ ದೇಶದ ಪ್ರತಿಯೊಬ್ಬ ನಾಗರಿಕನಿಗೂ ಹಕ್ಕುಗಳನ್ನು ನೀಡುವುದರ ಜೊತೆಗೆ ಕರ್ತವ್ಯಗಳನ್ನೂ ವಿಧಿಸಿದೆ. ಹಕ್ಕುಗಳ ಬಗ್ಗೆ ತಿಳಿದುಕೊಳ್ಳುವ ಜೊತೆಗೆ ಕರ್ತವ್ಯಗಳ ಬಗ್ಗೆಯೂ ಅರಿವು ಹೊಂದುವುದು ನಾಗರಿಕನ ಜವಾಬ್ದಾರಿ ಎಂದು ತಿಳಿಸಿದರು. ಭಾರತವು ವಿಶ್ವದ ಅತಿದೊಡ್ಡ ಪ್ರಜಾಪ್ರಭುತ್ವ ರಾಷ್ಟ್ರವಾಗಿದ್ದು, ಇದು ಕೇವಲ ಚುನಾವಣೆಗಳಿಗೆ ಮಾತ್ರವಲ್ಲದೆ ಸಂವಿಧಾನದ ಮೌಲ್ಯಗಳನ್ನು ಗೌರವಿಸುವ ಪ್ರತಿಯೊಬ್ಬ ನಾಗರಿಕನಲ್ಲಿ ಇರಬೇಕು. ದೇಶದ ಭವಿಷ್ಯವಾಗಿರುವ ಯುವಜನತೆ ಇದರ ಮೌಲ್ಯಗಳನ್ನು ಅರ್ಥ ಮಾಡಿಕೊಂಡು ಜವಾಬ್ದಾರಿಯುತ ನಾಗರಿಕರಾಗಿ ರೂಪುಗೊಳ್ಳಬೇಕು ಎಂದು ಹೇಳಿದರು.

ಸಂವಿಧಾನವು ಕೇವಲ ಒಂದು ಪುಸ್ತಕವಲ್ಲ, ಅದು ದೇಶದ ಆಡಳಿತ ವ್ಯವಸ್ಥೆಯ ಮೂಲ ಆಧಾರ ಹಾಗೂ ಪ್ರತಿಯೊಬ್ಬ ಭಾರತೀಯನ ಹಕ್ಕು–ಕರ್ತವ್ಯಗಳ ರಕ್ಷಾಕವಚವಾಗಿದೆ. ವಿದ್ಯಾರ್ಥಿಗಳು ಸಂವಿಧಾನದ ಪ್ರಸ್ತಾವನೆ, ಮೂಲಭೂತ ಹಕ್ಕುಗಳು, ಮೂಲಭೂತ ಕರ್ತವ್ಯಗಳು ಹಾಗೂ ಪ್ರಜಾಪ್ರಭುತ್ವದ ಮೌಲ್ಯಗಳ ಕುರಿತು ಹೆಚ್ಚಿನ ಜ್ಞಾನ ಪಡೆದುಕೊಳ್ಳಬೇಕು ಎಂದು ಹೇಳಿದರು

# ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ



ವಿಜಯನಗರ : ನಗರದ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿ ಮಂಗಳವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಆಶ್ರಯದಲ್ಲಿ ಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.

ಜಿಲ್ಲಾಧಿಕಾರಿ ಕವಿತಾ ಎಸ್, ಮನ್ನಿಕೇರಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗರಿಮಾ ಪನ್ವಾರ್, ಅಪರ ಜಿಲ್ಲಾಧಿಕಾರಿ ಪಿ.ಎನ್ ಲೋಕೇಶ್, ಅರಣ್ಯ ಇಲಾಖೆ ಉಪಸಂರಕ್ಷಣಾಧಿಕಾರಿ ಅನುಪಮ, ಉಪವಿಭಾಗಾಧಿಕಾರಿ ವಿವೇಕಾನಂದ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ವೈ. ಎ ಕಾಳೆ, ರವರು ಡಾ. ಬಿ.ಆರ್. ಅಂಬೇಡ್ಕರ್ ಅವರ ಪುತ್ಥಳಿಗೆ ಪುಷ್ಪಾರ್ಚನೆ ನೆರವೇರಿಸಿ ಗೌರವ ನಮನ ಸಲ್ಲಿಸಿದರು. ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕಿ ನಜೀಮಾ ಭಾನು ಪ್ರಜಾಪ್ರಭುತ್ವದ ಮೌಲ್ಯಗಳನ್ನು ಎತ್ತಿಹಿಡಿಯುವ ಸಂವಿಧಾನ ಪೀಠಿಕೆ ಪ್ರತಿಜ್ಞಾ ವಿಧಿ ಬೋಧಿಸಿದರು.

# ವಂದೇ ಮಾರತಂ ಗೀತೆಯ ಎರಡು ಚರಣ ಮಾತ್ರ ಹಾಡಿದ ಕಾರ್ಯಕ್ರಮದಿಂದ ಹೊರನಡೆದ ಶಾಸಕ ಚನ್ನಬಸಪ್ಪ

ಶಿವಮೊಗ್ಗ: ವಂದೇ ಮಾತರಂ ಗೀತೆಯಲ್ಲಿ ಕೇವಲ ಎರಡು ಚರಣವನ್ನು ಹಾಡಿದ್ದಕ್ಕೆ ಪ್ರಜಾಪ್ರಭುತ್ವ ದಿನಾಚರಣೆಯ ಕಾರ್ಯಕ್ರಮದಿಂದ ಶಿವಮೊಗ್ಗ ನಗರ ಶಾಸಕ ಎಸ್.ಎನ್. ಚನ್ನಬಸಪ್ಪ ಹೊರ ನಡೆದಿರುವ ಘಟನೆ ನಡೆದಿದೆ.

ಶಿವಮೊಗ್ಗದ ಅಂಬೇಡ್ಕರ್ ಭವನದಲ್ಲಿ ಮಂಗಳವಾರ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನದ ಕಾರ್ಯಕ್ರಮವನ್ನು ಜಿಲ್ಲಾಡಳಿತ ಆಯೋಜಿಸಿತ್ತು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶಾಸಕ ಚನ್ನಬಸಪ್ಪ ಕಾರ್ಯಕ್ರಮದಲ್ಲಿ ವಂದೇ ಮಾತರಂ ಗೀತೆಯ ಎರಡು ಚರಣ ಮಾತ್ರ ಹಾಡಿದ್ದಕ್ಕೆ ವೇದಿಕೆಯಲ್ಲಿಯೇ ಅಕ್ಷೇಪ ವ್ಯಕ್ತಪಡಿಸಿದರು.

ಅಲ್ಲದೆ ಕಾರ್ಯಕ್ರಮದಲ್ಲಿ ಜಿಲ್ಲಾ ನ್ಯಾಯಾಧೀಶರು ಹಾಗೂ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಂತೋಷ್ ಅವರು ಇದ್ದ ಕಾರ್ಯಕ್ರಮದಲ್ಲಿ ವಂದೇ ಮಾತರಂ ಗೀತೆಯನ್ನು ಕೇವಲ ಎರಡು ಚರಣ ಹಾಡಿ ಅಪಮಾನ ಮಾಡಲಾಗಿದೆ ಎಂದು ಅಧಿಕಾರಿಗಳ ವಿರುದ್ಧ ಕಿಡಿ–ಕಾರಿದರು.

ಕಾರ್ಯಕ್ರಮದಲ್ಲಿ ಎರಡು ಚರಣ ಹಾಡಬೇಕೆಂದು ಎಲ್ಲಿ ಇದೆ, ಆದೇಶ ತೋರಿಸಿ ಎಂದು ಆಗ್ರಹಿಸಿದರು. ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿ ಮಲ್ಲೇಶಪ್ಪ ರಾಜ್ಯ ಸರ್ಕಾರದ ಆದೇಶವನ್ನು ತೋರಿಸಿದರು. ಇದಕ್ಕೆ ಗರಂ ಆದ ಶಾಸಕರು ಹಾಗಾದ್ರೆ ಕೇಂದ್ರ ಸರ್ಕಾರದ ಆದೇಶವನ್ನು ಮೊಟಕುಗೊಳಿಸುವ ಅಧಿಕಾರ ರಾಜ್ಯ ಸರ್ಕಾರಕ್ಕೆ ಇಲ್ಲ. ವಂದೇ ಮಾತರಂ ಗೀತೆಗೆ ಅಪಮಾನ ಮಾಡಿದ ವೇದಿಕೆಯಲ್ಲಿ ನಾನು ಇರಲ್ಲ ಎಂದು ಭವನದಿಂದ ಹೊರ ನಡೆದರು.

ನಂತರ ತಮ್ಮ ಕಚೇರಿಯಲ್ಲಿ ಮಾಧ್ಯಮಗೋಷ್ಠಿ ನಡೆಸಿ ಮಾತನಾಡಿದ ಅವರು, ಕೇಂದ್ರ ಸರ್ಕಾರ ಇಡೀ ದೇಶಕ್ಕೆ ಸೇರಿ ಒಂದು ಕಾನೂನು ಮಾಡುತ್ತದೆ. ಆದರೆ ರಾಜ್ಯ ಸರ್ಕಾರವು ರಾಷ್ಟ್ರಪತಿ, ಉಪ ರಾಷ್ಟ್ರಪತಿ, ಪ್ರಧಾನ ಮಂತ್ರಿಗಳು ಇರುವ ಕಾರ್ಯಕ್ರಮದಲ್ಲಿ ಮಾತ್ರ ಪೂರ್ಣ ಗೀತೆ ಹಾಡಬೇಕು, ರಾಜ್ಯ ಸರ್ಕಾರದ ಕಾರ್ಯಕ್ರಮದಲ್ಲಿ ಕೇವಲ ಎರಡು ಚರಣ ಹಾಡಬೇಕೆಂದು ಆದೇಶ ಮಾಡಿದೆ. ಇದು ಸರಿ ಅಲ್ಲ ಎಂದು ಆಕ್ಷೇಪ ವ್ಯಕ್ತಪಡಿಸಿದರು.

ಕೇಂದ್ರ ಸರ್ಕಾರ ತೆಗೆದುಕೊಂಡ ನಿರ್ಣಯವನ್ನು ತೆಗೆದುಕೊಂಡು ವಂದೇ ಮಾತರಂ ಗೀತೆಗೆ 150 ವರ್ಷವಾದ ಕಾರಣ ಗೀತೆಯನ್ನು ಗಾಯನ ಮಾಡಬೇಕೆಂದು ಸಂಸತ್ತಿನಲ್ಲಿ ತಿದ್ದುಪಡಿ ಮಾಡಲಾಗಿದೆ. ಇದಕ್ಕೆ ರಾಷ್ಟ್ರಪತಿಗಳು ಅಂಕಿತ ಹಾಕಿದ್ದಾರೆ. ಆದರೆ ಇದನ್ನು ರಾಜ್ಯ ಸರ್ಕಾರ ತನ್ನ ಕ್ಯಾಬಿನೆಟ್‌ನಲ್ಲಿ ತೀರ್ಮಾನ ಮಾಡಲಾಗಿದೆ ಎಂದು ವಂದೇ ಮಾತರಂನ ಎರಡು ಚರಣ ಮಾತ್ರ ಹಾಡಲಾಗುತ್ತಿದೆ ಎಂದು ಹೇಳುತ್ತಿದ್ದಾರೆ. ಇಂದು ಅಂಬೇಡ್ಕರ್ ಭವನದಲ್ಲಿ ನಡೆದ ಪ್ರಜಾಪ್ರಭುತ್ವ ದಿನಾಚರಣೆಯಂದು ವಂದೇ ಮಾತರಂ ಗೀತೆಯನ್ನು ಕೇವಲ ಎರಡು ಚರಣವನ್ನು ಹಾಡಲಾಯಿತು. ಇದನ್ನು ಪ್ರಶ್ನಿಸಿದರೆ, ರಾಜ್ಯ ಸರ್ಕಾರದ ಆದೇಶ ಎಂದು ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ. ಇದರಿಂದ ನಾನು ಕಾರ್ಯಕ್ರಮದಿಂದ ಹೊರಗೆ ಬಂದಿದ್ದೇನೆ ಎಂದು ಶಾಸಕ ಚನ್ನಬಸಪ್ಪ ತಿಳಿಸಿದರು.



ರಾಷ್ಟ್ರಪತಿ, ಉಪ ರಾಷ್ಟ್ರಪತಿ ಹಾಗೂ ಪ್ರಧಾನಮಂತ್ರಿಗಳು, ಕೇಂದ್ರ ಸಚಿವರು ಇರುವ ಕಾರ್ಯಕ್ರಮ ಹೊರತುಪಡಿಸಿ ಉಳಿದ ಸರ್ಕಾರಿ ಕಾರ್ಯಕ್ರಮಗಳಲ್ಲಿ ವಂದೇ ಮಾತರಂ ಹಾಡಿನ ಎರಡು ಚರಣ ಮಾತ್ರ ಹಾಡಬೇಕೆಂದು ರಾಜ್ಯ ಸರ್ಕಾರ ಇತ್ತೀಚಿಗೆ ಆದೇಶ ಮಾಡಿದೆ. ಹಾಗಾದ್ರೆ ರಾಷ್ಟ್ರಪತಿ, ಉಪರಾಷ್ಟ್ರಪತಿ, ಪಿಎಂ ಅವರಿಗೆ ಒಂದು ಕಾನೂನು, ಸಾಮಾನ್ಯ ಜನರಿಗೆ ಒಂದು ಕಾನೂನು ಇದೆಯೇ ಎಂದು ಪ್ರಶ್ನಿಸಿದರು. ಕಾನೂನು ಅನ್ನು ಗಾಳಿಗೆ ತೂರುವ ಕೆಲಸ ಮಾಡುತ್ತಿದ್ದಿರಾ, ನೀವು ಈ ದೇಶದ ಪ್ರಜೆಗಳು ಅಲ್ವಾ ಎಂದು ಅವರು ಪ್ರಶ್ನಿಸಿದರು. ಕೇಂದ್ರ ಹಾಗೂ ರಾಜ್ಯ ಸರ್ಕಾರಕ್ಕೆ ಬೇರೆ ಬೇರೆ ಕಾನೂನು ಇದೆಯೇ ಎಂದರು.

ಜನಗಣಮನ ಗೀತೆಯಲ್ಲಿ ಎಲ್ಲ ರಾಜ್ಯಗಳ ಹೆಸರು ಇದೆಯೇ ಎಂದು ಪ್ರಶ್ನಿಸಿದರು. ಇದು ಅಕ್ಷಮ್ಯ ಅಪರಾಧವಾಗಿದೆ. ನ್ಯಾಯಾಧೀಶರ ಮುಂದೆ ಇಟ್ಟು–ಕೊಂಡು ನ್ಯಾಯಾಂಗಕ್ಕೆ ಕೊಡಲಿ ಪೆಟ್ಟು ಕೊಡುವ ಕೆಲಸ ಮಾಡಲಾಗುತ್ತಿದೆ. ಸಂವಿಧಾನಕ್ಕೆ ಅಪಪ್ರಚಾರ ಮಾಡಲು ಶಾಸಕ ಚನ್ನಿ ಬಿಡಲ್ಲ ಎಂದು ಹೇಳಿದರು.

ಸರ್ಕಾರಿ ಕಾರ್ಯಕ್ರಮದಲ್ಲೂ ಗೀತೆಯನ್ನು ಪೂರ್ಣ ಹಾಡಬೇಕಿತ್ತು. ನೀವು ನಿರ್ಣಯ ಮಾಡಿದಂತೆ ನಡೆಯಲ್ಲ. ಕಾಂಗ್ರೆಸ್ ಪಕ್ಷವನ್ನು ಅಲ್ಪಸಂಖ್ಯಾಂತರಿಗೆ ಅಡ ಇಡಲಾಗಿದೆ ಎಂದು ಶಾಸಕ ಚನ್ನಬಸಪ್ಪ ಕಿಡಿ–ಕಾರಿದ್ದಾರೆ. ಇದನ್ನು ಗಂಭೀರವಾಗಿ ತೆಗೆದುಕೊಂಡು ಹೋಗಬೇಕಿದೆ. ಇದು ಪ್ರಜಾಪ್ರಭುತ್ವಕ್ಕೆ ಮಾರಕವಾಗಿದೆ. 136 ಜನ ಇದ್ದೇವೆಂದು ಕಾಂಗ್ರೆಸ್ ಏನು ಮಾಡಿದ್ರು ನಡೆಯುತ್ತದೆ ಎಂದು ತಿಳಿದುಕೊಂಡರೆ ತಪ್ಪು. ಇಕ್ಕಟ್ಟಿಗೆ ಸಿಲುಕಿಕೊಂಡಿದ್ದಾರೆ. ಬಂಕಿಮಚಂದ್ರ ಚಟರ್ಜಿ ಆರಾಧ್ಯ ದೈವ ಎಂದರು.

ಸ್ವಾತಂತ್ರ್ಯ ಹೋರಾಟಕ್ಕೆ ವಂದೇ ಮಾತರಂ ಬೇಕಿತ್ತು. ಆದರೆ ಈಗ ಬೇಡವೇ ಎಂದು ಪ್ರಶ್ನಿಸಿದರು. ಸಂವಿಧಾನಕ್ಕೆ ಬಿಕ್ಕಟ್ಟಿನ ಸಂದರ್ಭ ಬಂದಿದೆ. ಇದನ್ನು ರಾಜ್ಯ ಸರ್ಕಾರ ಹುಟ್ಟುಹಾಕಿದೆ. ನಮ್ಮಲ್ಲಿ ಭಾರತೀಯ ನೀತಿ ಸಂಹಿತೆ ಇದೆಯೇ ಹೊರತು ಕರ್ನಾಟಕ ನೀತಿ ಸಂಹಿತೆ ಅಂತ ಇಲ್ಲ. ಮುಂದಿನ ವಾರ ನಡೆಯುವ ಅಧಿವೇಶನದಲ್ಲಿ ಇದನ್ನು ಪ್ರಶ್ನೆ ಮಾಡಲಾಗುವುದು ಎಂದರು.

# ಕಾಂಗ್ರೆಸ್ ವತಿಯಿಂದ ಸಚಿವ ಎಸ್‌ಎಸ್ ಮಲ್ಲಿಕಾರ್ಜುನ್ ಹುಟ್ಟುಹಬ್ಬದ ಅಂಗವಾಗಿ ಹಸುಗಳಿಗೆ ಮೇವು ತರಕಾರಿ ವಿತರಣೆ



ದಾವಣಗೆರೆ : ಗಣಿ ಮತ್ತು ಭೂ ವಿಜ್ಞಾನ ಸಚಿವರಾದ ಸನ್ಮಾನ್ಯ ಎಸ್ ಎಸ್ ಮಲ್ಲಿಕಾರ್ಜುನ್ ಅವರ 59ನೇ ಹುಟ್ಟುಹಬ್ಬದ ಅಂಗವಾಗಿ ಇಂದು ದಾವಣಗೆರೆ ನಗರದ ಅವರ್ಗರೆಯಲ್ಲಿರುವ ಗೋಶಾಲೆಯಲ್ಲಿ ಸಾವಿರಾರು ಹಸುಗಳಿಗೆ ಮೇವು ಮತ್ತು ತರಕಾರಿಗಳನ್ನು ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿಗಳಾದ ದಿನೇಶ್ ಕೆ ಶೆಟ್ಟಿ, ನೇತೃತ್ವದಲ್ಲಿ ನೀಡಲಾಯಿತು.

ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಆಯುಬ್ ಪೈಲ್ವಾನ್ ಮಹಿಳಾಧ್ಯಕ್ಷರಾದ ಅನಿತಾಬಾಯಿ ಮಹಾನಗರ ಪಾಲಿಕೆ ಮಾಜಿ ಸದಸ್ಯರಾದ ಎ ನಾಗರಾಜ್ ಎಸ್ ಮಲ್ಲಿಕಾರ್ಜುನ್ ಜಯಣ್ಣ ಗಿರೀಶ್ ದಾದಾಪೀರ್ ಹರೀಶ್ ಕೆಂಗನಹಳ್ಳಿ ಸಾಗರ್ ಎಲ್ ಎಂ ಹೆಚ್ ರಾಕೇಶ್ ಮುಜಾಯಿದ್ ರಾಜೇಶ್ವರಿ ಕೆ ಪಿ ದ್ರಾಕ್ಷಣಮ್ಮ ರಾಜೇಶ್ವರಿ ಟಿ ಎಂ ಮಂಗಳಮ್ಮ ಕಾವೇರಿ ಸಲ್ಮಾಬಾನು ಜಯ ಶಾಮನೂರ್ ಇನ್ನು ಮುಂತಾದವರು ಇದ್ದರು


# ಹಳಿ ಮೇಲೆ ಬಿದ್ದ ಮರ; ತಾಳಗುಪ್ಪ– ಬೆಂಗಳೂರು ರೈಲು ಸಂಚಾರದಲ್ಲಿ ವ್ಯತ್ಯಯ: ಪ್ರಯಾಣಿಕರ ಪರದಾಟ

ಶಿವಮೊಗ್ಗ: ಅರಸಾಳು ರೈಲು ಹಳಿ ಮೇಲೆ ಮರ ಬಿದ್ದ ಪರಿಣಾಮ ತಾಳಗುಪ್ಪದಿಂದ ಬೆಂಗಳೂರಿಗೆ ಹೊರಟಿದ್ದ ಇಂಟ–ರ್ ಸಿಟಿ ಸೂಪರ್ ಫಾಸ್ಟ್ ರೈಲಿನ ಸಂಚಾರದಲ್ಲಿ ವ್ಯತ್ಯಯ ಉಂಟಾಗಿದೆ. ಇದರಿಂದ ಗೌರಿ ಗಣೇಶ ಹಬ್ಬ ಮುಗಿಸಿ ಕೆಲಸಕ್ಕಾಗಿ ಬೆಂಗಳೂರಿಗೆ ಹೊರಟಿದ್ದವರು ಪರದಾಡುವಂತಾಗಿದೆ.

ರೈಲು ಎಂದಿನಂತೆ ತಾಳಗುಪ್ಪವನ್ನು ಬೆಳಗ್ಗೆ 5:15 ಕ್ಕೆ ಬಿಟ್ಟಿತ್ತು. ಸಮಯಕ್ಕೆ ಸರಿಯಾಗಿ ಹೊಸನಗರ ತಾಲೂಕಿನ ಅರಸಾಳು ಬಳಿ ಬಂದಿತ್ತು. ಈ ವೇಳೆ ರೈಲು ಹಳಿ ಮೇಲೆ ಬೃಹತ್ ಮರವೊಂದು ಬಿದ್ದ ಪರಿಣಾಮ ರೈಲನ್ನು ನಿಲ್ಲಿಸಲಾಗಿದೆ.

ಹಳಿ ಮೇಲಿಂದ ಮರವನ್ನು ತೆರವು ಮಾಡಲು ಸಾಕಷ್ಟು ಸಮಯ ಬೇಕಾಗುತ್ತಿದೆ. ರೈಲು ನಿಂತ ಪರಿಣಾಮ ಬೆಂಗಳೂರಿಗೆ ಹೊರಟಿದ್ದ ಸಾಗರ, ಶಿರಸಿಯ ಜನರು ರೈಲಿನಲ್ಲಿಯೇ ಉಳಿದು ಕೊಂಡು ಪೇಚಿಗೆ ಸಿಲುಕಿದ್ದಾರೆ. ಇನ್ನು ಶಿವಮೊಗ್ಗದಿಂದ ಬೆಂಗಳೂರಿಗೆ ಹೊರಟಿದ್ದ ಪ್ರಯಾಣಿಕರು ಶಿವಮೊಗ್ಗ ರೈಲು ನಿಲ್ದಾಣದಲ್ಲೇ ಕಾಯುವಂತಾಗಿತ್ತು. ಬೆಳಗ್ಗೆ 7 ರಿಂದ 7.15 ಕ್ಕೆ ರೈಲು ಶಿವಮೊಗ್ಗಕ್ಕೆ ಬಂದು ಬೆಂಗಳೂರಿಗೆ 12 ರಿಂದ 12.30 ಕ್ಕೆ ತಲುಪಬೇಕಿತ್ತು.

ರೈಲ್ವೆ ಇಲಾಖೆಯ ಕಾರ್ಮಿಕರು ಹಾಗೂ ಅರಸಾಳು ಗ್ರಾಮಸ್ಥರ ಸಹಕಾರದಿಂದ ಮರ ತೆರವು ಕಾರ್ಯಾಚರಣೆ ನಡೆಯುತ್ತಿದೆ. ಇದರಿಂದ ಕೆಲ ಸಮಯದಲ್ಲಿಯೇ ರೈಲು ಹೊರಡಲಿದೆ ಎಂದು ರೈಲ್ವೆ ಇಲಾಖೆ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.




ರೈಲು ಪ್ರಯಾಣಿಕರು ಮಾತನಾಡಿ, ರೈಲು ಬೆಳಗ್ಗೆ 6:15 ಕ್ಕೆ ಅರಸಾಳು ರೈಲು ನಿಲ್ದಾಣದ ಬಳಿ ಬಂದು ರೈಲು ನಿಂತಿತು. ನಂತರ, ಹಳಿ ಮೇಲೆ ಮರ ಬಿದ್ದಿದೆ ಅಂತ ಹೇಳಿದ್ರು. ಶಿವಮೊಗ್ಗದಿಂದ ಡಿಸೇಲ್ ಇಂಜಿನ್ ಬರಲಿದೆ ಎಂದು ತಿಳಿಸಿದ್ದಾರೆ. ಹಬ್ಬಕ್ಕೆಂದು ಬಂದವರು ರೈಲಿನಲ್ಲಿ ಇದ್ದಾರೆ. ಇದ–ರಿಂದ ಸಮಯಕ್ಕೆ ಸರಿಯಾಗಿ ಬೆಂಗಳೂರಿಗೆ ತಲುಪಲು ಆಗುತ್ತಿಲ್ಲ. ಆದಷ್ಟು ಬೇಗ ಮರ ತೆರವುಗೊಳಿಸಿ ಸಂಚಾರಕ್ಕೆ ಅವಕಾಶ ಮಾಡಿಕೊಡಬೇಕು ಎಂದು ವಿನಂತಿಸಿಕೊಂಡಿದ್ದಾರೆ.

EDITOR : S VENKATESULU, D.NO.: 4/38, MAIN ROAD, SETTUR, ANANTHAPUR, ANDHRA PRADESH - 515767, PUBLISHER : S VENKATESULU 237, Ward No 22 Talur Road, Lingamma Compund, Bellary, Bellary, Karnataka - 583101. KARNATAKA - 583113.
OWNER : S VENKATESULU D.NO.: 4/38, MAIN ROAD, SETTUR, ANANTHAPUR, ANDHRA PRADESH - 515767. PRINTER: VADDARA DODDA VEERESH, 1ST WARD, NAYAKARA ONI, AGASARA ONI, AT/POST-SOMALAPURA, BELLARY, KARNATAKA - 583101.